# ಕನ್ನಡ ಪೋಸ್ಟ್

ಇದು ಸುದ್ದಿ ವಿಳಾಸ

ಸಂಪಾದಕ : ಮಂಜು ಬನವಾಸೆ

KANNADA POST

ಕನ್ನಡ ದಿನ ಪತ್ರಿಕೆ Kannada Daily

ಹಾಸನ E-mail : kannadapostnews@gmail.com / ಕನ್ನಡ post Price: ₹1

Vol.No.01 | Issue. 177 | Pages. 2 | Date: 21-05-2025, WEDNESDAY RNI NO: KARKAN/2024/89601

ಸಂಪುಟ : 01 - ಸಂಚಿಕೆ : 177 - ಪುಟಗಳು : 2 - 21 ಮೇ 2025 ಬುಧವಾರ Ph: 8762954248 ದರ : ₹1


# ಸಾವಿರ ಅಡಿ ಉದ್ದದ ತ್ರಿವರ್ಣ ಧ್ವಜ ಮೆರವಣಿಗೆ

## ಆಪರೇಷನ್ ಸಿಂಧೂರ ಯಶಸ್ಸು ಹಿನ್ನೆಲೆ | ಸಾವಿರಾರು ಜನರು ಭಾಗಿ

**ಕನ್ನಡ ಪೋಸ್ಟ್ ನ್ಯೂಸ್ ನೆಟ್ವರ್ಕ್**

ಹಾಸನ: ಪಾಕಿಸ್ತಾನದ ಉಗ್ರರ ನೆಲೆಗಳನ್ನು ಗುರಿಯಾಗಿಸಿಕೊಂಡು ಭಾರತೀಯ ಸೇನೆ ನಡೆಸಿದ ಆಪರೇಷನ್ ಸಿಂದೂರ ಕಾರ್ಯಾಚರಣೆ ಯಶಸ್ಸಿನ ಹಿನ್ನೆಲೆಯಲ್ಲಿ ಮಂಗಳವಾರ ನಗರದಲ್ಲಿ ತಿರಂಗಾ ಯಾತ್ರೆ ನಡೆಯಿತು.

ಸಾವಿರಾರು ವಿದ್ಯಾರ್ಥಿಗಳು, ಮಹಿಳೆಯರು, ಯುವಕರು ಹಾಗು ಮಾಜಿ ಸೈನಿಕರು ಯಾತ್ರೆಯಲ್ಲಿ ಭಾಗವಹಿಸಿದರು. ಜಿಲ್ಲಾ ಕ್ರೀಡಾಂಗಣದಿಂದ ಒಂದು ಸಾವಿರ ಅಡಿ ಉದ್ದದ ತ್ರಿವರ್ಣ ಧ್ವಜದೊಂದಿಗೆ ಮೆರವಣಿಗೆ ಬಂದ ವಿದ್ಯಾರ್ಥಿಗಳು, ಮಹಿಳೆಯರು, ಮಾಜಿ ಸೈನಿಕರು ಹಾಗೂ ನಾಗರಿಕರು ಮೆರವಣಿಗೆಯುದ್ದಕ್ಕೂ ಭಾರತೀಯ ಸೇನೆ, ಭಾರತ ಮಾತೆಗೆ ಜೈಕಾರ ಮೊಳಗಿಸಿದರು. ಜಿಲ್ಲಾ ಕ್ರೀಡಾಂಗಣದಿಂದ ಆರಂಭವಾದ ಯಾತ್ರೆ ಮಹಾವೀರ ವೃತ್ತ, ಎನ್. ಆರ್. ವೃತ್ತದ ಮೂಲಕ ಹೇಮಾವತಿ ಪ್ರತಿಮೆ ಬಳಿ ಅಂತ್ಯವಾಯಿತು. ಜೋರು ಮಳೆ ನಡುವೆಯೂ ಸಾರ್ವಜನಿಕರು ಅತ್ಯುತ್ಸಾಹದಿಂದ ಕಾರ್ಯಕ್ರಮದಲ್ಲಿ ಪಾಲ್ಗೊಂಡರು.




ಸೇನೆಗೆ ಸಲಾಂ: ಬಿಜೆಪಿ ರಾಜ್ಯ ಪ್ರಧಾನ ಕಾರ್ಯದರ್ಶಿ ಪ್ರೀತಂ ಜೆ. ಗೌಡ ಮಾತನಾಡಿ, ಏ. 22 ರಂದು ಪಹಲ್ಗಾಮ್‌ನಲ್ಲಿ ನಡೆದ 26 ಭಾರತೀಯ ಪ್ರವಾಸಿಗರ ಹತ್ಯೆಗೆ ಪ್ರತೀಕಾರವಾಗಿ ಮೇ 7ರ ರಾತ್ರಿ, ಭಾರತೀಯ ಸೇನೆ ನಡೆಸಿದ ಆಪರೇಷನ್ ಸಿಂಧೂರ ಕಾರ್ಯಾಚರಣೆ ಯಶಸ್ವಿಯಾಗಿದೆ. ಈ ಮೂಲಕ ಭಾರತೀಯ ಸೇನೆಯ ಶಕ್ತಿಯನ್ನು ಜಗತ್ತು ನೋಡುವಂತಾಗಿದೆ. ಭಾರತದ ವಿರುದ್ಧ ಹಗೆತನ ಸಾಧಿಸುತ್ತಿರುವ ಪಾಕಿಸ್ತಾನಕ್ಕೆ ಭಾರತ ತಕ್ಕ ತಿರುಗೇಟು ನೀಡಿದೆ ಎಂದರು.

ಭಾರತೀಯ ಹೆಮ್ಮೆಯ ಸೈನಿಕರಿಗೆ ಆತ್ಮಸ್ಥೈರ್ಯ ತುಂಬಲು ಬಿಜೆಪಿ ವತಿಯಿಂದ ತಿರಂಗಾ ಯಾತ್ರೆ ಹಮ್ಮಿಕೊಳ್ಳಲಾಗಿದೆ. ಅದಕ್ಕೆ ದೇಶಭಕ್ತ ಸಂಘಟನೆಗಳು, ನಾಗರಿಕರು ಹಾಗೂ ವಿದ್ಯಾರ್ಥಿಗಳು ಕೈ ಜೋಡಿಸಿದ್ದಾರೆ. ಜೋರು ಮಳೆ ನಡುವೆಯೂ ಕೂಡ ಯುವ ಸಮೂಹ ರಸ್ತೆಗಳಿದು ಸೈನಿಕರ ಬಲ ಮತ್ತು ಮಾನಸಿಕ ಸ್ಥೈರ್ಯ ಹೆಚ್ಚಿಸಲು ಒಂದಾಗಿದೆ. ಯುವಕರಲ್ಲಿ ರಾಷ್ಟ್ರ ಭಕ್ತಿ ಹೆಚ್ಚಬೇಕು. ಜವಾಬ್ದಾರಿಯುತ ನಾಗರಿಕನಾಗಿ ಸೈನಿಕರಿಗೆ ವಿಶ್ವಾಸ ತುಂಬಲು ಯಾತ್ರೆಯಲ್ಲಿ ಭಾಗಿಯಾಗಿದ್ದೇನೆ ಎಂದರು.

ಬಿಜೆಪಿ ಜಿಲ್ಲಾಧ್ಯಕ್ಷ ಸಿದ್ದೇಶ್ ನಾಗೇಂದ್ರ, ಮಾತನಾಡಿ, ಪಾಕಿಸ್ತಾನಿ ಉಗ್ರರು ಭಾರತದ ವಿರುದ್ಧ ಹಲವು ವರ್ಷಗಳಿಂದ ದ್ವೇಷ ಸಾಧಿಸುತ್ತಿದ್ದಾರೆ. ಶಾಂತಿಯ ತೋಟವಾದ ಭಾರತಕ್ಕೆ ಧಕ್ಕೆಯುಂಟು ಮಾಡುವುದೇ ಅವರ ಕೆಲಸವಾಗಿದೆ. ಪಹಲ್ಗಾಮ್ ಘಟನೆಗೆ ಪ್ರತೀಕಾರವಾಗಿ ಭಾರತೀಯ ಸೇನೆ 100ಕ್ಕೂ ಉಗ್ರರನ್ನು ಕೊಂದು ಹಾಕಿದೆ ಎಂದು ಹೇಳಿದರು.

ಭಾರತ ಯಾವಾಗಲೂ ಶಾಂತಿ ಬಯಸುತ್ತದೆ. ನಾವು ಯಾರ ಮೇಲೂ ಯುದ್ಧ ಸಾರುವುದಿಲ್ಲ. ಆದರೆ ನಮ್ಮ ತಂಟೆಗೆ ಬಂದರೆ ಸುಮ್ಮನೆ ಬಿಡುವುದಿಲ್ಲ ಎಂಬುದನ್ನು ನಮ್ಮ ಸೇನೆ ಈಗಾಗಲೇ ಸಾಬೀತುಪಡಿಸಿದೆ. ನಮಗೆ ಹೋರಾಟ ಪಾಕಿಸ್ತಾನದ ಉಗ್ರರ ವಿರುದ್ಧ ಹೊರತು ಅಲ್ಲಿನ ನಾಗರಿಕರ ಮೇಲೆ ಅಲ್ಲ. ಈ ವಿಚಾರವನ್ನು ದೇಶ ವಾಸಿಗಳು ಅರ್ಥ ಮಾಡಿಕೊಳ್ಳಬೇಕು. ಪ್ರಧಾನಿ ನರೇಂದ್ರ ಮೋದಿ ಅವರು ಸಹ ಈ ನಿಟ್ಟಿನಲ್ಲಿ ತಮ್ಮ ನಿಲುವು ಸ್ಪಷ್ಟಪಡಿಸಿದ್ದಾರೆ. ಉಗ್ರ ಚಟುವಟಿಕೆಗಳು ಸಂಪೂರ್ಣ ನಿಲ್ಲುವವರೆಗೆ ಭಾರತದ ಹೋರಾಟ ನಿರಂತರವಾಗಿರುತ್ತದೆ ಎಂದರು.



ಹಳೇಬೀಡು ಪುಷ್ಪಗಿರಿ ಮಠದ ಶ್ರೀ ಸೋಮಶೇಖರ ಸ್ವಾಮೀಜಿ, ಶ್ರೀ ಮಹೇಶ್ವರ ಸ್ವಾಮೀಜಿ, ಕೆಸವತ್ತೂರು ಶ್ರೀ ಬಸವರಾಜೇಂದ್ರ ಸ್ವಾಮೀಜಿ, ಅರಕಲಗೂಡು ದೊಡ್ಡಮಠದ ಶ್ರೀ ಮಲ್ಲಿಕಾರ್ಜುನ ಸ್ವಾಮೀಜಿ, ಸಕಲೇಶಪುರ ಕ್ಷೇತ್ರ ಶಾಸಕ ಸಿಮೆಂಟ್ ಮಂಜು, ಬಿಜೆಪಿ ಜಿಲ್ಲಾ ಪ್ರಧಾನ ಕಾರ್ಯದರ್ಶಿ ಅಮಿತ್ ಶೆಟ್ಟಿ, ಆರ್‌ಎಸ್‌ಎಸ್ ಮುಖಂಡರಾದ ವಿಜಯಕುಮಾರ್ ನಾರ್ವೆ, ಮಾಜಿ ಸೈನಿಕರ ಸಮನ್ವಯ ಸಮಿತಿ ಜಿಲ್ಲಾಧ್ಯಕ್ಷ ಪ್ರದೀಪ್ ಸಾಗರ್, ಬಿ. ದೊರೆರಾಜು, ಬಿ.ಕೆ. ವೆಂಕಟೇಶ್, ಪ್ರಭಾಕರ್, ಲೋಕೇಶ್, ಅಖಿಲ ಭಾರತ ವೀರಶೈವ ಲಿಂಗಾಯ ಮಹಾಸಭಾ ತಾಲ್ಲೂಕು ಅಧ್ಯಕ್ಷ ಕಟ್ಟಾಯ ಶಿವಕುಮಾರ್, ಹೆಚ್. ಎನ್. ನಾಗೇಶ್, ಚನ್ನಕೇಶವ, ಹರ್ಷಿತ್ ಮತ್ತಿತರರು ಹಾಜರಿದ್ದರು.

## ಕಸಾಯಿ ಖಾನೆಗೆ ಸಾಗಿಸುತ್ತಿದ್ದ ಜಾನುವಾರು ರಕ್ಷಣೆ



ಬೇಲೂರು: ಅಕ್ರಮವಾಗಿ ಕಸಾಯಿ ಖಾನೆಗೆ ಸಾಗಿಸುತ್ತಿದ್ದ ಜಾನುವಾರುಗಳನ್ನು ಮಂಗಳವಾರ ಪೊಲೀಸರು ರಕ್ಷಿಸಿ, ವಾಹನ ಚಾಲಕ ಹಾಸನದ ಖಲೀಲ್ ಪಾಷಾ(30)ನನ್ನು ಬಂಧಿಸಿದರು.

ವಿಶ್ವ ಹಿಂದು ಪರಿಷತ್ ಕಾರ್ಯಕರ್ತರ ಮಾಹಿತಿ ಅನ್ವಯ ಪೊಲೀಸರು ದಾಳಿ ನಡೆಸಿದಾಗ ಆರೋಪಿ ಹಾಸನದ ಕಡೆಯಿಂದ ಚಿಕ್ಕಮಗಳೂರು ಕಡೆಗೆ ಸರಕು ಸಾಗಾಣಿಕೆ ವಾಹನದಲ್ಲಿ ಸಾಗಿಸುತ್ತಿರುವುದು ಖಚಿತವಾಯಿತು.

ಕೂಡಲೆ ಪಿಎಸ್ಐ ಶಿವನಗೌಡ ಪಾಟೀಲ್ ನೇತೃತ್ವದಲ್ಲಿ ಪಟ್ಟಣದ ರಾಯಪುರ ಗ್ರಾಮದ ಬಳಿ ಅತಿ ವೇಗವಾಗಿ ಚಲಿಸುತ್ತಿದ್ದ ವಾಹನ ಅಡ್ಡಗಟ್ಟಿ ಪರಿಶೀಲಿಸಿದರು. ಅಲ್ಲಿ ಜಾನುವಾರು ಕಂಡು ಬಂದವು. ಬೇಲೂರು ಪೊಲೀಸ್ ಠಾಣೆಯಲ್ಲಿ ಪ್ರಕರಣ ದಾಖಲಿಸಿ, ಜಾನುವಾರುಗಳನ್ನು ಗೋ ಶಾಲೆಗೆ ಕಳುಹಿಸಿಕೊಡಲಾಯಿತು.

ವಿಶ್ವ ಹಿಂದು ಪರಿಷತ್ ತಾಲ್ಲೂಕು ಘಟಕದ ಪ್ರಧಾನ ಕಾರ್ಯದರ್ಶಿ ನಾಗೇಶ್ (ಗುಂಡ) ಮಾತನಾಡಿ, ಪೊಲೀಸ್, ಪುರಸಭೆ ಹಾಗೂ ಕಂದಾಯ ಇಲಾಖೆ ತಿಂಗಳಿಗೊಮ್ಮೆ ಗೋ ಮಾಂಸ ಅಡ್ಡೆಗಳ ಮೇಲೆ ದಾಳಿ ನಡೆಸುತ್ತಿವೆ. ಆದರೂ, ಪಟ್ಟಣದಲ್ಲಿ ಕದ್ದುಮುಚ್ಚಿ ಮಾರಾಟ ಮಾಡಲಾಗುತ್ತಿದೆ ಎಂದರು.


ದಾಳಿಯಲ್ಲಿ ಪೊಲೀಸ್ ಇಲಾಖೆಯ ದೇವರಾಜು, ದೇವೇಂದ್ರ, ಅಣ್ಣಪ್ಪ, ಹಾಗೂ ವಿಶ್ವ ಹಿಂದು ಪರಿಷತ್ ಅರುಣ್, ಭರತ್ ಪಾಲ್ಗೊಂಡಿದ್ದರು.

## ಮೇ 27ಕ್ಕೆ ಜಿಲ್ಲಾಧಿಕಾರಿ ಕಚೇರಿ ಎದುರು ಪ್ರತಿಭಟನೆ

**ಕನ್ನಡ ಪೋಸ್ಟ್ ನ್ಯೂಸ್ ನೆಟ್ವರ್ಕ್**

ಚನ್ನರಾಯಪಟ್ಟಣ: ತಹಶೀಲ್ದಾರ್ ನವೀನ್‌ಕುಮಾರ್ ಅವರು ಎರಡು ವರ್ಷಗಳ ಹಿಂದೆ ನಡೆಸಿದ್ದಾರೆ ಎನ್ನಲಾದ ಸಂಭಾಷಣೆಯಲ್ಲಿ ರಾಜ್ಯ ಸರ್ಕಾರದ ಕುರಿತು ಹಗುರವಾಗಿ ಮಾತನಾಡಿದ್ದು ಸತ್ಯಾಸತ್ಯತೆ ಪರಿಶೀಲಿಸಬೇಕು ಎಂದು ಭ್ರಷ್ಟಾಚಾರ ವಿರೋಧಿ ಆಂದೋಲನ ವೇದಿಕೆ ಸಂಚಾಲಕ ಎಚ್.ಎಸ್. ಮಂಜುನಾಥ್ ಆಗ್ರಹಿಸಿದರು.

ಸುದ್ದಿಗೋಷ್ಠಿಯಲ್ಲಿ ಮಂಗಳವಾರ ಮಾತನಾಡಿ, ತಹಶೀಲ್ದಾರ್ ತಪ್ಪು ಮಾಡಿರುವುದು ಮೇಲ್ನೋಟಕ್ಕೆ ಸಾಬೀತಾಗಿದೆ. ಅವರ ವಿರುದ್ಧ ಕಾನೂನು ಕ್ರಮಕ್ಕೆ ಆಗ್ರಹಿಸಿ ಮೇ 27 ರಂದು ಮಂಗಳವಾರ ಜಿಲ್ಲಾಧಿಕಾರಿ ಕಚೇರಿ ಎದುರು ಪ್ರತಿಭಟನೆ ಹಮ್ಮಿಕೊಳ್ಳಲಾಗಿದೆ ಎಂದು ತಿಳಿಸಿದರು.



ತಹಶೀಲ್ದಾರ್ ಭ್ರಷ್ಟ ಅಧಿಕಾರಿಯಾಗಿದ್ದು, ಅಂತವರಿಗೆ ನಮ್ಮ ತಾಲ್ಲೂಕು ಹುಲ್ಲುಗಾವಲಾಗಿದೆ. ತಾಲ್ಲೂಕಿನ ಎಲ್ಲ ಇಲಾಖೆಗಳಲ್ಲಿ ಬ್ರಹ್ಮಾಂಡ ಭ್ರಷ್ಟಾಚಾರ ತಾಂಡವವಾಡುತ್ತಿದೆ. ಅದನ್ನು ತಡೆಗಟ್ಟುವುದು ನಮ್ಮ ಉದ್ದೇಶವಾಗಿದೆ. ಕೆಎಎಸ್ ಅಧಿಕಾರಿಯೇ ಹೀಗಾದರೆ ಕಾರ್ಯಾಂಗದ ಸ್ಥಿತಿ ಏನಾಗಬೇಕು ಎನ್ನುವುದು ಪ್ರಶ್ನೆಯಾಗಿದ್ದು, ಇಲ್ಲಿ ನಡೆಯುತ್ತಿರುವ ಕರ್ಮಕಾಂಡ ಕೊನೆಗಾಣಿಸುವವರೆಗೂ ನಮ್ಮ ಸಮರ ನಿಲ್ಲುವುದಿಲ್ಲ. ಭ್ರಷ್ಟಾಚಾರವನ್ನು ಹಂತ ಹಂತವಾಗಿ ಕಡಿಮೆ ಮಾಡುವ ಕಾರ್ಯವನ್ನು ನಾವು ಮಾಡಿಯೇ ತೀರುತ್ತೇವೆ.

ಮುಂದಿನ ಪೀಳಿಗೆ ಬದುಕಬೇಕಾದರೆ ನಮ್ಮ ಹೋರಾಟ ಅನಿವಾರ್ಯವಾಗಿದೆ. ಸಾಮಾಜಿಕ ವ್ಯವಸ್ಥೆ ಬದಲಾಗಬೇಕು. ತಾಲ್ಲೂಕಿನ ವಿವಿಧ ಇಲಾಖೆಗಳು ಶುದ್ಧೀಕರಣವಾಗಬೇಕು ಎನ್ನುವುದು ನಮ್ಮ ಆಶಯವಾಗಿದೆ ಎಂದರು. ಇಂತಹ ಕಡು ಭ್ರಷ್ಟ ಅಧಿಕಾರಿಯ ಬಗ್ಗೆ ಜಿಲ್ಲಾ ಉಸ್ತುವಾರಿ ಸಚಿವರು, ಶಾಸಕರು ಹಾಗೂ ಜನಪ್ರತಿನಿಧಿಗಳು ಪ್ರತಿಕ್ರಿಯೆ ನೀಡದೆ ಮೌನವಹಿಸಿರುವುದು ಹಲವು ಅನುಮಾನಕ್ಕೆ ಎಡೆಮಾಡಿಕೊಟ್ಟಿದೆ ಎಂದರು.

ಹೋರಾಟಗಾರರಾದ ಸಿ.ಜಿ. ರವಿ, ಶಂಕರ್ ಬರಗೂರು, ತೇಜಸ್ ಗೌಡ, ರಾಮಚಂದ್ರು, ಮಹೇಶ್ ಗುಲಸಿಂದ, ಉತ್ತೇನಹಳ್ಳಿ ಚಂದ್ರು, ದೊರೆ ಇತರರಿದ್ದರು.


## ಚನ್ನಪಟ್ಟಣ ಹೌಸಿಂಗ್ ಬೋರ್ಡ್‌ನಲ್ಲಿ ದುಷ್ಕರ್ಮಿಗಳ ಓಡಾಟ

**ಕನ್ನಡ ಪೋಸ್ಟ್ ನ್ಯೂಸ್ ನೆಟ್ವರ್ಕ್**

ಹಾಸನ: ನಗರದ ಹೌಸಿಂಗ್ ಬೋರ್ಡ್ ಬಡಾವಣೆಯಲ್ಲಿ ಸೋಮವಾರ ರಾತ್ರಿ ಮನೆ ಕಳವಿಗೆ ವಿಫಲ ಯತ್ನ ನಡೆದಿದ್ದು ಕೈಯಲ್ಲಿ ಕಬ್ಬಿಣದ ರಾಡ್ ಹಿಡಿದು ಓಡಾಡುತ್ತಿರುವ ಯುವಕರು ಆತಂಕ ಸೃಷ್ಟಿಸಿದ್ದಾರೆ.

ಬಡಾವಣೆಯ 2ನೇ ಮುಖ್ಯ ರಸ್ತೆಯ ವರುಣ್ ಎಂಬುವವರ ಮನೆಯ ಎರಡನೇ ಅಂತಸ್ತಿನಲ್ಲಿರುವ ಬಾಡಿಗೆ ಮನೆಗಳ ಬಾಗಿಲಿಗೆ ಹೊರಗಿನಿಂದ ಚಿಲಕ ಹಾಕಿರುವ ದುಷ್ಕರ್ಮಿಗಳು ನಂತರ ಮಹಿಳೆಯೊಬ್ಬರು ವಾಸವಿರುವ ಮನೆಯ ಕಿಟಕಿ ತೆರೆದು ಒಳಗಿನ ಬೋಲ್ಟ್ ತೆರೆಯಲು ಯತ್ನಿಸಿದ್ದಾರೆ.

ಶಬ್ದವಾಗಿದ್ದರಿಂದ ಎಚ್ಚರಗೊಂಡ ಮಹಿಳೆ ಕಿರುಚಾಡಿದ್ದಾರೆ. ಆದರೂ ದುಷ್ಕರ್ಮಿಗಳು ಹಿಂಜರಿಕೆ ತೋರಿಸದೆ ಬಾಗಿಲು ತೆಗೆಯುವ ಯತ್ನ ನಡೆಸಿದರು.



ಮಹಿಳೆ ಕೂಗಾಟದಿಂದ ಎಚ್ಚರವಾದ ಮನೆ ಮಾಲೀಕ ವರುಣ್, ವಿದ್ಯುತ್ ದೀಪ ಹಚ್ಚಿದಾಗ ಅಂದಾಜು 18 ರಿಂದ 20 ವರ್ಷದ ಯುವಕರು ಅಲ್ಲಿಂದ ಓಡಿ ಹೋಗಿದ್ದಾರೆ. ಇಬ್ಬರು ಕೈಯಲ್ಲಿ ದೊಡ್ಡ ರಾಡ್ ಹಿಡಿದಿದ್ದರು. ಮಧ್ಯರಾತ್ರಿ 2.45ರ ಸಮಯದಲ್ಲಿ ಘಟನೆ ನಡೆದಿದೆ.

ಕಳೆದ ರಾತ್ರಿಯಷ್ಟೇ ಯಗಚಿ ವೃತ್ತ ಸಮೀಪದ ಮನೆಯ ಗೇಟ್ ಬಾಗಿಲು ಬೋಲ್ಟ್ ಹಾಕಿ ಎರಡು ಬೈಕ್‌ಗಳಲ್ಲಿ ಪೆಟ್ರೋಲ್ ಕಳವು ಮಾಡಿದ್ದಾರೆ. ಯುವಕರು ಪದೇ ಪದೇ ಬಡಾವಣೆಯಲ್ಲಿ ತಿರುಗಾಡುತ್ತಿದ್ದಾರೆ. ಅರಕಲಗೂಡು ಬೈಪಾಸ್ ರಸ್ತೆ ಮತ್ತೊಂದೆಡೆ ಹೊಸ ಬಸ್ ನಿಲ್ದಾಣಕ್ಕೆ ಸಂಪರ್ಕಿಸುವ ರಸ್ತೆ ಇದಾಗಿದ್ದು ರಾತ್ರಿಯೂ ವಾಹನ ಸಂಚಾರ ಹೆಚ್ಚಿರುತ್ತದೆ.

ಪೊಲೀಸರು ಸರಿಯಾಗಿ ಗಸ್ತು ತಿರುಗುವುದಿಲ್ಲ. ಹೀಗಾಗಿ ಕಳವು ಹಾಗೂ ದರೋಡೆ ಆತಂಕದಲ್ಲಿ ಬದುಕುವಾಗಿದೆ ಎಂದು ಸ್ಥಳೀಯರು ಆತಂಕ ವ್ಯಕ್ತಪಡಿಸಿದ್ದಾರೆ.

> ಒಂಟಿ ಮಹಿಳೆಯಿದ್ದ ಮನೆಯ ಬಾಗಿಲು ಪಕ್ಕದ ಕಿಟಕಿ ತೆರೆದು ಕೈ ಹಾಕಿ ಬಾಗಿಲು ಬೋಲ್ಟ್ ತೆರೆಯಲು ಯತ್ನಿಸಿದ್ದಾರೆ. ಇದರಿಂದ ಎಚ್ಚರವಾದ ಮಹಿಳೆ ಭಯದಿಂದ ಕಿರುಚಾಡಿದರೂ ಅವರು ಕೊಂಚವೂ ವಿಚಲಿತರಾಗಿಲ್ಲ. ಅಲ್ಲದೇ ಕೈನಲ್ಲಿ ದೊಡ್ಡ ರಾಡ್ ಹಿಡಿದಿದ್ದರು. ಒಂದು ವೇಳೆ ಅವರು ಬಾಗಿಲು ತೆರೆಯಲು ಯಶಸ್ವಿಯಾಗಿದ್ದರೆ ಭಾರಿ ಅನಾಹುತ ಸಂಭವಿಸಬಹುದಿತ್ತು. ಮಹಿಳೆಯ ಕಿರುಚಾಟ ಹಾಗೂ ದುಷ್ಕರ್ಮಿಗಳು ಪರಾರಿಯಾಗಿರುವ ದೃಶ್ಯಗಳು ಸಿಸಿಟಿವಿಯಲ್ಲಿ ಸೆರೆಯಾಗಿದೆ.
>
> **– ರಮೇಶ್, ಸ್ಥಳೀಯ ನಿವಾಸಿ**

## ನಿಟ್ಟೂರು ಕೃಷಿ ಪತ್ತಿನ ಸಹಕಾರ ಸಂಘ: ಜೆಡಿಎಸ್ ಮೇಲುಗೈ



ಹಾಸನ: ತಾಲ್ಲೂಕಿನ ನಿಟ್ಟೂರು ಪ್ರಾಥಮಿಕ ಕೃಷಿ ಪತ್ತಿನ ಸಹಕಾರ ಸಂಘದ ಚುನಾವಣೆಯಲ್ಲಿ ಒಟ್ಟು 12 ಸ್ಥಾನಗಳ ಪೈಕಿ ಸಾಲಗಾರರ ಕ್ಷೇತ್ರದಿಂದ ಜೆಡಿಎಸ್ ಬೆಂಬಲಿತ 11 ಅಭ್ಯರ್ಥಿಗಳು ವಿಜಯಶಾಲಿ ಗಳಾಗಿದ್ದಾರೆ.

ಇವರಲ್ಲಿ ಸಂಘದ ಮಾಜಿ ಅಧ್ಯಕ್ಷರು ಹಾಗೂ ವಕೀಲ ಲಿಂಗರಸನಹಳ್ಳಿ ಈ. ತಮ್ಮಣ್ಣಗೌಡ 1057 ಮತ ಪಡೆಯುವ ಮೂಲಕ ಸತತ ನಾಲ್ಕನೇ ಬಾರಿಗೆ ನಿರ್ದೇಶಕರಾಗಿ ಆಯ್ಕೆಯಾಗಿದ್ದಾರೆ. ಟಿ.ಹೆಚ್. ಚಂದ್ರಶೇಖರ 1063, ಎಸ್. ಎಸ್. ದಿನೇಶ 1023, ಈಶ್ವರಪ್ಪ 1010, ಜಗನ್ನಾಥ 976, ಮಮತಾ ರಘುನಾಥ್ 944, ವೈ.ಹೆಚ್. ಹಾಲಸಿದ್ದಪ್ಪ 937, ತೋಟೇಶ್ 925, ಪ್ರತಾಪ್ 921, ಎನ್.ಎಸ್. ರವೀಶ್ 920, ವಿನೋದಮ್ಮ ದೊರೆಸ್ವಾಮಿ 911ಮತ ಪಡೆದು ಗೆಲುವು ಸಾಧಿಸಿದ್ದಾರೆ.

ಚುನಾವಣೆಯಲ್ಲಿ ಸಾಮಾನ್ಯ, ಪ್ರವರ್ಗ ಎ ಮತ್ತು ಬಿ, ಮಹಿಳೆ, ಪರಿಶಿಷ್ಟ ಜಾತಿ ಮತ್ತು ಪಂಗಡ ಹೀಗೆ ವಿವಿಧ ವರ್ಗಗಳಿಗೆ ಮೀಸಲಾಗಿದ್ದ ಸ್ಥಾನಗಳಲ್ಲಿ ಒಟ್ಟು 23 ಅಭ್ಯರ್ಥಿಗಳು ಸ್ಪರ್ಧೆ ಮಾಡಿದ್ದರು. ವಿವಿಧ ಕ್ಷೇತ್ರಗಳಿಂದ ವಿಜೇತರಾಗಿರುವ ಜೆಡಿಎಸ್ ಬೆಂಬಲಿತ ಅಭ್ಯರ್ಥಿಗಳಿಗೆ ಶಾಸಕ ಹೆಚ್.ಪಿ. ಸ್ವರೂಪ್ ಶುಭ ಕೋರಿದ್ದಾರೆ.


ಸತತ 4 ಬಾರಿ ಜಯ: ವಿಜೇತ ಅಭ್ಯರ್ಥಿಗಳ ಪೈಕಿ ಈ.ತಮ್ಮಣ್ಣಗೌಡರು ಕಳೆದ 20 ವರ್ಷಗಳಿಂದ ನಿಟ್ಟೂರು ಪ್ರಾಥಮಿಕ ಕೃಷಿ ಪತ್ತಿನ ಸಹಕಾರ ಸಂಘದ ಚುನಾವಣೆಯಲ್ಲಿ ಸತತವಾಗಿ 4 ಬಾರಿ ಗೆಲುವು ಸಾಧಿಸಿದ್ದಾರೆ. ಈ ಬಾರಿ ವಿಜೇತ ಅಭ್ಯರ್ಥಿಗಳ ಪೈಕಿ ಅತ್ಯಧಿಕ ಮತ ಪಡೆದು ವಿಜಯಿ ಶಾಲಿಯಾಗಿದ್ದಾರೆ. ಎರಡು ಬಾರಿ ಅಧ್ಯಕ್ಷರಾಗಿಯೂ ಉತ್ತಮ ರೀತಿಯಲ್ಲಿ ಕೆಲಸ ಮಾಡಿ ಗಮನ ಸೆಳೆದಿದ್ದಾರೆ.

## ಮಳೆಗಾಲದಲ್ಲಿ ಜಾಗರೂಕತೆ ಅವಶ್ಯ : ಬಾಲಕೃಷ್ಣ

**ಕನ್ನಡ ಪೋಸ್ಟ್ ನ್ಯೂಸ್ ನೆಟ್ವರ್ಕ್**

ಚನ್ನರಾಯಪಟ್ಟಣ: ಮಳೆಗಾಲ ಸಮಯದಲ್ಲಿ ಸಾರ್ವಜನಿಕರು ಜಾಗರೂಕರಾಗಿರಬೇಕು. ಮನೆಗಳ ಗೋಡೆ ಕುಸಿತ, ವಿದ್ಯುತ್ ಅವಘಡ ಸಂಭವಿಸುವ ಸಾಧ್ಯತೆಯಿರುವುದರಿಂದ ಎಚ್ಚರವಾಗಿರಬೇಕು ಎಂದು ಶಾಸಕ ಸಿ.ಎನ್. ಬಾಲಕೃಷ್ಣ ಹೇಳಿದರು.

ತಾಲ್ಲೂಕಿನ ಹಿರೀಸಾವೆ ಗ್ರಾಮದಲ್ಲಿ ಸೋಮವಾರ ಸುರಿದ ಮಳೆಯಿಂದ ಮನೆಯ ಗೋಡೆ ಕುಸಿದು ಬಿದ್ದಿದ್ದ ರಫೀಕ್ ಅವರ ಮನೆಗೆ ಮಂಗಳವಾರ ಭೇಟಿ ನೀಡಿ ಮಾತನಾಡಿದರು. ಮಳೆ ಸಮಯದಲ್ಲಿ ಜನರು ಜಾಗೃತರಾಗಿರಬೇಕು. ತೇವಾಂಶದಿಂದ ಅಲ್ಲಲ್ಲಿ ವಿದ್ಯುತ್ ಶಾರ್ಟ್ ಸರ್ಕ್ಯೂಟ್ ಉಂಟಾಗುವ ಸಂಭವ ಹೆಚ್ಚಿರುತ್ತದೆ. ರಾಜ್ಯದ ಕೆಲವು ಕಡೆ ವಿದ್ಯುತ್ ಸ್ಪರ್ಶದಿಂದ ಸಾವನ್ನಪ್ಪಿರುವ ಸುದ್ದಿ ಬಂದಿವೆ. ರೈತರು ಜಾನುವಾರುಗಳನ್ನು ವಿದ್ಯುತ್ ಕಂಬ ಹಾಗೂ ಮಾರ್ಗದಿಂದ ದೂರದಲ್ಲಿ ಕಟ್ಟವಂತೆ ತಿಳಿಸಿದರು.



ಸ್ಥಳಿಯ ಅಧಿಕಾರಿಗಳಿಂದ ಮಾಹಿತಿ ಪಡೆದು ತಹಶೀಲ್ದಾರ್ ಸರ್ಕಾರಕ್ಕೆ ಮಾಹಿತಿ ತಲುಪಿಸಬೇಕು. ಈ ಬಗ್ಗೆ ಜಿಲ್ಲೆಯ ಎಲ್ಲಾ ತಹಶೀಲ್ದಾರ್ ಮತ್ತು ಆರ್‌ಐಗಳಿಗೆ ಜಿಲ್ಲಾಧಿಕಾರಿ ಸೂಚನೆ ನೀಡಬೇಕು. ಸರ್ಕಾರದ ಆದೇಶದಂತೆ ಮಳೆಯಿಂದ ಹಾನಿಯಾದ ಸಂತ್ರಸ್ತರಿಗೆ 1.15 ಲಕ್ಷ ರೂ. ಪರಿಹಾರ ಕಲ್ಪಿಸಬೇಕು ಎಂದರು.

ತಾತ್ಕಾಲಿಕವಾಗಿ ಹತ್ತು ಸಾವಿರ ರೂ. ಪರಿಹಾರ ಮೊತ್ತವನ್ನು ಗ್ರಾಮ ಪಂಚಾಯಿತಿಯಿಂದ ನೀಡಬೇಕು. ಹಿರೀಸಾವೆ, ಜಿನ್ನೇನಹಳ್ಳಿ ಸೇರಿ ಮಳೆಯಿಂದ ಹಾನಿಯಾಗಿರುವ ಮನೆಗಳಿಗೆ ಶಾಸಕರು ಭೇಟಿ ನೀಡಿದರು.

ಪಿಎಸಿಸಿಬಿ ಅಧ್ಯಕ್ಷ ಮಹೇಶ್, ಗ್ರಾಮ ಪಂಚಾಯಿತಿ ಸದಸ್ಯ ಸಂತೋಷ್, ಜೆಡಿಎಸ್ ಮುಖಂಡರಾದ ರವಿಕುಮಾರ್, ಜೆಸಿಬಿ ರಾಮೇಗೌಡ, ವೆಂಕಟೇಶ್ ಮತ್ತಿತರರು ಇದ್ದರು.

## ಗಂಭೀರ ಆರೋಗ್ಯ ಸಮಸ್ಯೆಗೆ 'ಜನಪ್ರಿಯ' ಪರಿಹಾರ

**ಕನ್ನಡ ಪೋಸ್ಟ್ ನ್ಯೂಸ್ ನೆಟ್ವರ್ಕ್**

ಹಾಸನ: ಸಕಲೇಶಪುರದ ವ್ಯಕ್ತಿ ಹಾಗೂ ಬೆಂಗಳೂರಿನ ಬಾಲಕಿಯೊಬ್ಬಳಿಗೆ ಯಶಸ್ವಿ ಶಸ್ತ್ರಚಿಕಿತ್ಸೆ ಮೂಲಕ ಜನಪ್ರಿಯ ಆಸ್ಪತ್ರೆ ದಾಖಲೆ ಮಾಡಿದೆ ಎಂದು ಆಸ್ಪತ್ರೆ ಮುಖ್ಯಸ್ಥ ಡಾ. ವಿ.ಕೆ. ಅಬ್ದುಲ್ ಬಷೀರ್ ಹೇಳಿದರು.

ಸುದ್ದಿಗೋಷ್ಠಿಯಲ್ಲಿ ಮಂಗಳವಾರ ಮಾತನಾಡಿ, ಆಟೋ ಪಲ್ಟಿಯಾಗಿ ಸಂಪೂರ್ಣ ಸ್ವಾಧೀನ ಕಳೆದುಕೊಂಡಿದ್ದ ಬಾಲಕಿಯ ಕೈಯನ್ನು ಯಶಸ್ವಿ ಶಸ್ತ್ರಚಿಕಿತ್ಸೆ ಮೂಲಕ ಸರಿಪಡಿಸಲಾಗಿದೆ. 13 ವರ್ಷದ ಬಾಲಕಿ ಮೇಲೆ ಆಟೋ ಮಗುಚಿ ಬಿದ್ದು ಬಲಗೈ ನುಜ್ಜುಗುಜ್ಜಾಗಿತ್ತು. ಬೆಂಗಳೂರಿನ ಎರಡು ಪ್ರತಿಷ್ಠಿತ ಆಸ್ಪತ್ರೆಗೆ ತೋರಿಸಿದಾಗ ಕೈ ಕತ್ತರಿಸಬೇಕೆಂದು ವೈದ್ಯರು ಹೇಳಿದ್ದರು. ಬಾಲಕಿಯ ಪೋಷಕರು ಹಿರೀಸಾವೆಯ ತಮ್ಮ ಸಂಬಂಧಿಕರ ಸಲಹೆ ಮೇರೆಗೆ ನಮ್ಮ ಆಸ್ಪತ್ರೆಗೆ ಬಂದಿದ್ದರು. ಬಾಲಕಿಯ ಕೈ ಜಜ್ಜಿ ಮೂಳೆ, ನರ, ಮಾಂಸಖಂಡಗಳು ಬೇರ್ಪಟ್ಟಿದ್ದವು. ನಮ್ಮ ವೈದ್ಯರು ಶಸ್ತ್ರಚಿಕಿತ್ಸೆ ಮೂಲಕ ಕೃತಕ ಮೂಳೆಗಳನ್ನು ಜೋಡಿಸಿ ಕೈ ಉಳಿಸಿದ್ದಾರೆ. ಕೈ ಬೆರಳುಗಳನ್ನು ಈಗ ಬಾಲಕಿ ಆಡಿಸುತ್ತಿದ್ದು ಸಂಪೂರ್ಣ ಗುಣಮುಖಳಾಗಿದ್ದಾರೆ ಎಂದು ತಿಳಿಸಿದರು.




ಮತ್ತೊಂದು ಪ್ರಕರಣದಲ್ಲಿ ಸಕಲೇಶಪುರದ ಟೈಯರ್ ಕಾರ್ಖಾನೆಯಲ್ಲಿ ಕೆಲಸ ಮಡುವಾಗ ಭಾರವಾದ ಯಂತ್ರದ ಬ್ಲೇಡ್ ಹೊಟ್ಟೆ ಮೇಲೆ ಬಿದ್ದು ಅದರ ಒತ್ತಡಕ್ಕೆ ಐದರಿಂದ ಆರು ಮೀಟರ್‌ನಷ್ಟು ಕರಳು ಕಿತ್ತು ಹೊರಗೆ ಬಂದಿದ್ದವು. ಆಸ್ಪತ್ರೆಗೆ ಕರೆತರುವಾಗ ರೋಗಿ ಸಂಬಂಧಿಕರು ಕರಳನ್ನು ಸಹ ಪ್ರತ್ಯೇಕವಾಗಿ ಹೊತ್ತು ತಂದಿದ್ದರು. ಆ ವ್ಯಕ್ತಿಯನ್ನು ಉಳಿಸಿಕೊಳ್ಳುವುದು ಅಸಾಧ್ಯ ಎಂಬ ಪರಿಸ್ಥಿತಿ ಇತ್ತು. ಆಸ್ಪತ್ರೆಯ ನುರಿತ ವೈದ್ಯರು ಸಮಯೋಚಿತ ಶಸ್ತ್ರಚಿಕಿತ್ಸೆ ಮಾಡಿದರು.

ಗಾಯಾಳು ಈಗ ಆರೋಗ್ಯವಾಗಿದ್ದಾರೆ ಎಂದು ಹೇಳಿದರು.

ಶಸ್ತ್ರಚಿಕಿತ್ಸಕರಾದ ಡಾ. ಪ್ರವೀಣ್, ಡಾ. ಸುಹಾಸ್, ಡಾ. ರಜತ್, ಡಾ. ಮನೋಜ್‌ಗೌಡ, ಡಾ. ತ್ರಿಷಾರ್ ಇದ್ದರು.

## ಪಾರದರ್ಶಕ ಮರಳು ಹರಾಜಿಗೆ ಒತ್ತಾಯ

ಸಕಲೇಶಪುರ: ಜಿಲ್ಲೆಯಲ್ಲಿ ಮರಳು ಹರಾಜು ಪ್ರಕ್ರಿಯೆ ಪಾರದರ್ಶಕವಾಗಿ ನಡೆಯುವಂತೆ ಅಗತ್ಯ ಕ್ರಮ ಜರುಗಿಸಬೇಕು ಎಂದು ಬಿಡ್ಡುದಾರು ಜಿಲ್ಲಾಡಕ್ಕೆ ಆಗ್ರಹಿಸಿದರು.

ಪಟ್ಟಣದ ಲಯನ್ಸ್ ಸಭಾಂಗಣದಲ್ಲಿ ಮಂಗಳವಾರ ಮರಳು ಗುತ್ತಿಗೆದಾರರ ಪೂರ್ವಭಾವಿ ಸಭೆ ನಡೆಯಿತು.

ಮೇ 7ಕ್ಕೆ ಸಕಲೇಶಪುರ, ಆಲೂರು ಮತ್ತು ಬೇಲೂರು ತಾಲ್ಲೂಕಿನ ಒಟ್ಟು 26 ಕಡೆ ಸ್ಥಳ ಗುರುತಿಸಿ ಮರಳು ಹರಾಜು ಪ್ರಕ್ರಿಯೆ ನಡೆಸಲಾಗಿತ್ತು. ಹರಾಜಿನಲ್ಲಿ ಒಟ್ಟು 130 ಗುತ್ತಿಗೆದಾರರು ಭಾಗವಹಿಸಿದ್ದಾರೆ. ಟೆಂಡರ್‌ನ ತಾಂತ್ರಿಕವಾಗಿ ದಾಖಲೆಗಳ ಪರಿಶೀಲನೆ ಜಿಲ್ಲಾಡಳಿತ ನಡೆಸಬೇಕಿದೆ. ಈ ಟೆಂಡರ್ ಪ್ರಕ್ರಿಯೆಯಲ್ಲಿ ಕೆಲ ರಾಜಕೀಯ ಪ್ರಭಾವಿಗಳು ಭಾಗವಹಿದ್ದು ಅಧಿಕಾರಿಗಳ ಮೇಲೆ ತಮ್ಮ ಪ್ರಭಾವ ಬೀರುವ ಸಾಧ್ಯತೆ ಇದೆ. ಜಿಲ್ಲಾಡಳಿತ ಪ್ರಭಾವಕ್ಕೆ ಮಣಿಯದೆ ಪಾರದರ್ಶಕತೆ ಕಾಯ್ದುಕೊಳ್ಳಬೇಕು ಎಂದರು.

ಗುತ್ತಿಗೆದಾರರಾದ ಹರೀಶ, ನವೀನ್, ಮಂಜುನಾಥ, ಅಬ್ಬು, ಕಿಟ್ಟಿ ಪ್ರಸಾದ್ ಹಾಜರಿದ್ದರು.

## ಎಂ. ಮುಕ್ತಗೆ ಎನ್‌ಡಿಎ ಪರೀಕ್ಷೆಯಲ್ಲಿ ಡಿಸ್ಟಿಂಕ್ಷನ್

ಹಾಸನ: ನಗರದ ನೇತಾಜಿ ಐಟಿಐ ಪ್ರಾಂಶುಪಾಲ ಜಿ. ಮಹೇಂದ್ರ ಹಾಗೂ ಮಹಾನಗರ ಪಾಲಿಕೆ ಎಂಜಿನೀಯರ್ ಕೆ.ಆರ್. ಕವಿತಾ ಅವರ ಪುತ್ರಿ ಎಂ. ಮುಕ್ತ ಎನ್‌ಡಿಎ (ನ್ಯಾಷನಲ್ ಡಿಫೆನ್ಸ್ ಅಕಾಡೆಮಿ) ಪರೀಕ್ಷೆಯಲ್ಲಿ ಡಿಸ್ಟಿಂಕ್ಷನ್ ಪಡೆದಿದ್ದಾರೆ.

ಮೂಡಬಿದಿರೆಯ ಎಕ್ಸಲೆಂಟ್ ಕಾಲೇಜು ವಿದ್ಯಾರ್ಥಿನಿ ಎಂ. ಮುಕ್ತ ದ್ವಿತೀಯ ಪಿಯು ಪರೀಕ್ಷೆಯಲ್ಲೂ ಶೇ. 97.83 ಫಲಿತಾಂಶ



ಪಡೆದಿದ್ದಾರೆ. ಒಂದರಿಂದ ಏಳನೇ ತರಗತಿ ವರೆಗೆ ಹಾಸನದ ಯುನೈಟೆಡ್ ಆಕಾಡೆಮಿ, ಎಂಟರಿಂದ ಹತ್ತನೇ ತರಗತಿ ವಿಜಯ ಶಾಲೆ ಹಾಗೂ ಪಿಯು ವ್ಯಾಸಂಗವನ್ನು ಮೂಡಬಿದಿರೆಯಲ್ಲಿ ಮಾಡಿದ್ದಾರೆ. ವಿದ್ಯಾರ್ಥಿನಿ ಯ ಸಾಧನೆಗೆ ಕಾಲೇಜು ಆಡಳಿತ ಮಂಡಳಿ ಹಾಗೂ ಪಾಲಕರು ಅಭಿನಂದನೆ ತಿಳಿಸಿದ್ದಾರೆ.

# ಆರೋಗ್ಯ ಶಿಬಿರದಲ್ಲಿ 600ಕ್ಕೂ ಅಧಿಕ ಜನರು ಭಾಗಿ

## ಸಮಾರಂಭ ಉದ್ಘಾಟಿಸಿದ ಶ್ರೀ ಶಂಭುನಾಥ ಸ್ವಾಮೀಜಿ | ಸಾರ್ವಜನಿಕರ ಸ್ಪಂದನೆ

**ಕನ್ನಡ ಪೋಸ್ಟ್ ನ್ಯೂಸ್ ನೆಟ್ವರ್ಕ್**

ಹಾಸನ: ಪರಿಸರ ಪ್ರೇಮಿ ಹಾಗೂ ಸಮಾಜ ಸೇವಕ ಹನುಮೇಗೌಡ ಹಾಗೂ ರೋಟರಿ ಕ್ಲಬ್ ಆಫ್ ಸೆಂಟ್ರಲ್ ಹಾಸನ, ಶ್ರೀ ಲಕ್ಷ್ಮೀ ರಂಗನಾಥ ಎಜುಕೇಶನ್ ಟ್ರಸ್ಟ್ ಸಂಯುಕ್ತಾಶ್ರಯದಲ್ಲಿ ಇತ್ತೀಚೆಗೆ ತಾಲ್ಲೂಕಿನ ಕೌಶಿಕ ಗ್ರಾಮ ಪಂಚಾಯಿತಿ ವ್ಯಾಪ್ತಿಯ ಶೆಟ್ಟಿಹಳ್ಳಿಯಲ್ಲಿ ಆರೋಗ್ಯ ತಪಾಸಣಾ ಶಿಬಿರ ಹಾಗೂ ಗಿಡ ನೆಡುವ ಕಾರ್ಯಕ್ರಮ ಹಮ್ಮಿಕೊಳ್ಳಲಾಗಿತ್ತು.



ಆದಿಚುಂಚನಗಿರಿ ಹಾಸನ ಶಾಖಾ ಮಠದ ಶ್ರೀ ಶಂಭುನಾಥ ಸ್ವಾಮೀಜಿ ಗಿಡ ನೆಡುವ ಮೂಲಕ ಕಾರ್ಯಕ್ರಮಕ್ಕೆ ಚಾಲನೆ ನೀಡಿದರು.

ಜಿಲ್ಲಾ ಕನ್ನಡ ಸಾಹಿತ್ಯ ಪರಿಷತ್ ಅಧ್ಯಕ್ಷ ಡಾ. ಎಚ್.ಎಲ್. ಮಲ್ಲೇಶಗೌಡ ಮಾತನಾಡಿ, ಆರೋಗ್ಯದ ಮುಂದೆ ಬೇರೇನೂ ಮುಖ್ಯವಲ್ಲ. ಈ ನಿಟ್ಟಿನಲ್ಲಿ ಎಲ್ಲರೂ ಆರೋಗ್ಯ ಕಾಪಾಡಿಕೊಳ್ಳುವತ್ತ ಚಿತ್ತ ಹರಿಸಬೇಕಿದೆ ಎಂದರು.

ಆರೋಗ್ಯ ತಪಾಸಣಾ ಶಿಬಿರಗಳು ಗ್ರಾಮೀಣ ಭಾಗದ ಜನರಿಗೆ ಹೆಚ್ಚೆಚ್ಚು ಉಪಯುಕ್ತವಾಗುತ್ತವೆ. ದೂರದ ಊರುಗಳಿಂದ ನಗರ ಭಾಗಕ್ಕೆ ಬಂದು ಆರೋಗ್ಯ ತಪಾಸಣೆ ಮಾಡಿಸಿಕೊಳ್ಳಲು ಎಲ್ಲರಿಂದಲೂ ಸಾಧ್ಯವಿಲ್ಲ. ಹಾಗಾಗೀ ಗ್ರಾಮೀಣ ಪ್ರದೇಶಗಳಲ್ಲಿ ಆರೋಗ್ಯ ತಪಾಸಣಾ ಶಿಬಿರಗಳು ಹೆಚ್ಚು ನಡೆಯಬೇಕಿದೆ ಎಂದರು.

ಬಹುತೇಕರು ಗಳಿಸಿದ್ದೆಲ್ಲವನ್ನು ಕೂಡಿಡುವ ಕೆಲಸಕ್ಕೆ ಮುಂದಾಗುತ್ತಾರೆ ಕೆಲವರು ಮಾತ್ರ ಸಮಾಜಮುಖಿಯಾಗಿ ಸೇವಾ ಮನೋಭಾವನೆ ಬೆಳೆಸಿಕೊಳ್ಳುತ್ತಾರೆ.

ಅಂತವರು ಮಾತ್ರ ಜನರ ಮನಸ್ಸಿನಲ್ಲಿ ನೆಲೆ ನಿಲ್ಲುತ್ತಾರೆ ಎಂಬುದನ್ನು ಯಾರು ಮರೆಯಬಾರದು ಎಂದು ಆರೋಗ್ಯ ತಪಾಸಣಾ ಶಿಬಿರ ಆಯೋಜಿಸಿರುವ ಹನುಮೇಗೌಡ ಹಾಗೂ ವಿವಿಧ ಸಂಘ ಸಂಸ್ಥೆಗಳ ಕಾರ್ಯವನ್ನು ಶ್ಲಾಘಿಸಿದರು.

ರೋಟರಿ ಕ್ಲಬ್ ಆಫ್ ಸೆಂಟ್ರಲ್ ಅಧ್ಯಕ್ಷ ರೊ. ಎಂ.ಡಿ. ನಾಗೇಶ್ ಮಾತನಾಡಿ, ರೋಟರಿ ಸದಾ ಸಮಾಜದ ಒಳಿತಿಗಾಗಿ ಯೋಜನೆಗಳನ್ನು ರೂಪಿಸಿಕೊಂಡು ಮುನ್ನಡೆಯುತ್ತಿರುತ್ತದೆ. ರೋಟರಿ ಸಮಾಜದ ಒಳಿತಿಗಾಗಿ ಸಾಕಷ್ಟು ಕಾರ್ಯಗಳನ್ನು ಈವರೆಗೂ ಮಾಡಿದ್ದು, ರೋಟರಿಯ ಸೇವೆ ಅಂತಾರಾಷ್ಟ್ರೀಯ ಮಟ್ಟದಿಂದ ಹಿಡಿದು ಹಳ್ಳಿಗಳವರೆಗೂ ವ್ಯಾಪಿಸಿದೆ ಎಂದರು.

ರೋಟರಿ ಎಂದರೆ ಸೇವೆ, ಸೇವೆಗಾಗಿ ರೋಟರಿ ಕುಟುಂಬ ಸದಾ ಸಿದ್ದವಿರುತ್ತದೆ. ಪೋಲೀಯೋ ನಿರ್ಮೂಲನೆಯಿಂದ ಹಿಡಿದು ವಿವಿಧ ಕಾಲಘಟ್ಟಗಳಲ್ಲಿ ಎದುರಾಗಿರುವ ವಿಪತ್ತುಗಳ ಸಂದರ್ಭದಲ್ಲಿ ರೋಟರಿ ತನ್ನ ಸೇವೆಯನ್ನು ನೀಡುತ್ತಾ, ವಿವಿಧ ಸಂಘ-ಸಂಸ್ಥೆಗಳಿಗೆ ಮಾದರಿಯಾಗಿ ಮುನ್ನಡೆದುಕೊಂಡು ಬಂದಿದೆ ಎಂದರು.

ಪರಿಸರ ಪ್ರೇಮಿ ಹಾಗೂ ಸಮಾಜ ಸೇವಕ ಹನುಮೇಗೌಡ ಮಾತನಾಡಿ, ಬಡ ಕುಟುಂಬದಲ್ಲಿ ಹುಟ್ಟಿ ಬೆಳೆದ ನಾನು ಸಮಾಜಕ್ಕೆ ಏನಾದರೂ ಕೊಡುಗೆ ನೀಡಬೇಕೆಂಬ ಆಕಾಂಕ್ಷೆ ಹೊಂದಿದ್ದೇನೆ. ದೂರದ ಆಂಧ್ರಪ್ರದೇಶದಲ್ಲಿ ಬೇಕರಿಗಳ ಉದ್ಯಮ ನಡೆಸುತ್ತಿರುವ ನಾನು ಹುಟ್ಟೂರಿಗೆ ನನ್ನ ಕೈಲಾದ ಸೇವೆ ಮಾಡಬೇಕೆಂಬ ಸದುದ್ದೇಶ ಹೊಂದಿ ಸುಮಾರು 500 ಗಿಡಗಳನ್ನು ನೆಟ್ಟು ಸುರಕ್ಷಿತವಾಗಿ ಬೆಳೆಸಲು ಕಬ್ಬಿಣದ ಗಾರ್ಡ್ ವ್ಯವಸ್ಥೆ, ಬೇಸಿಗೆಯಲ್ಲಿ ನೀರುಣಿಸಲು ಟ್ಯಾಂಕರ್ ವ್ಯವಸ್ಥೆ ಮಾಡಿದ್ದೇನೆ.ಜೊತೆಗೆ ಆರೋಗ್ಯ ತಪಾಸಣಾ ಶಿಬಿರದಂತಹ ಸಮಾಜ ಸೇವೆ ನನಗೆ ಧನ್ಯತಾಭಾವ ಮೂಡಿಸಿದೆ ಎಂದರು.

ಜಿಲ್ಲಾ ಕನ್ನಡ ಸಾಹಿತ್ಯ ಪರಿಷತ್ತಿನ ಗೌರವ ಕಾರ್ಯದರ್ಶಿ ಬಿ.ಆರ್ ಬೊಮ್ಮೇಗೌಡ ಪ್ರಾಸ್ತಾವಿಕ ನುಡಿಗಳನ್ನಾಡಿದರು. 25 ಕ್ಕೂ ಹೆಚ್ಚು ನಿವೃತ್ತ ಯೋಧರನ್ನು ಕಾರ್ಯಕ್ರಮದಲ್ಲಿ ಸನ್ಮಾನಿಸಿ ಗೌರವಿಸಲಾಯಿತು.

ಆದಿಚುಂಚನಗಿರಿ ಆಸ್ಪತ್ರೆ, ಜೀವಜ್ಯೋತಿ ಆಸ್ಪತ್ರೆ, ಅಮ್ಮ ಕಣ್ಣಿನ ಆಸ್ಪತ್ರೆ, ಪ್ರಸೂತಿ ಮತ್ತು ಸ್ತ್ರಿರೋಗ ತಜ್ಞ ವೈದ್ಯರ ಸಂಘದಿಂದ ತಪಾಸಣಾ ಶಿಬಿರ ನಡೆಸಲಾಯಿತು. 600ಕ್ಕೂ ಹೆಚ್ಚು ಜನರು ಶಿಬಿರದಲ್ಲಿ ಆರೋಗ್ಯ ತಪಾಸಣೆ ಮಾಡಿಸಿಕೊಂಡರು.

ಧರ್ಮಸ್ಥಳ ಗ್ರಾಮಾಭಿವೃದ್ಧಿ ಯೋಜನೆಯ ಹಾಸನ ತಾಲೂಕು ಯೋಜನಾಧಿಕಾರಿ ಧನಂಜಯ್, ಲಕ್ಷ್ಮೀ ರಂಗನಾಥ ಎಜುಕೇಶನ್ ಟ್ರಸ್ಟ್ ಮುಖ್ಯಸ್ಥ ನಾಗೇಂದ್ರ, ಸಮಾಜ ಕಲ್ಯಾಣ ಇಲಾಖೆ ನಿವೃತ್ತ ಜಂಟಿ ನಿರ್ದೇಶಕ ಲಕ್ಷ್ಮೇಗೌಡ, ನಿವೃತ್ತ ಯೋಧರ ಸಂಘದ ಪದಾಧಿಕಾರಿಗಳು, ರೋಟರಿ ಕ್ಲಬ್ ಆಫ್ ಸೆಂಟ್ರಲ್‌ನ ಪದಾಧಿಕಾರಿಗಳು ಸ್ಥಳೀಯ ಮುಖಂಡರು ಹಾಗೂ ಗ್ರಾಮಸ್ಥರು ಹಾಜರಿದ್ದರು.

# ಪ್ರತಿಭೆ ಅನ್ವೇಷಣೆ ಕಾಯಕದಲ್ಲಿ ಕೇಂದ್ರ ಸಾಹಿತ್ಯ ವೇದಿಕೆ

**ಕನ್ನಡ ಪೋಸ್ಟ್ ನ್ಯೂಸ್ ನೆಟ್ವರ್ಕ್**

ಹಾಸನ: ಕೇಂದ್ರ ಕನ್ನಡ ಸಾಹಿತ್ಯ ವೇದಿಕೆ ಹೊಸ ಹೊಸ ಪ್ರತಿಭೆಗಳ ಮೇಲೆ ಬೆಳಕು ಚೆಲ್ಲುತ್ತಾ ಅಂತಹವರನ್ನು ಸಮಾಜದ ಮುಖ್ಯ ವಾಹಿನಿಗೆ ತರುವ ನಿಟ್ಟಿನಲ್ಲಿ ಏಳೆಂಟು ವರ್ಷಗಳಿಂದ ಕಾರ್ಯೋನ್ಮುಖವಾಗಿದೆ ಎಂದು ವೇದಿಕೆ ತಾಲ್ಲೂಕು ಅಧ್ಯಕ್ಷೆ ಕೆ.ಸಿ. ಗೀತಾ ಹೇಳಿದರು.




ಕೇಂದ್ರ ಕನ್ನಡ ಸಾಹಿತ್ಯ ವೇದಿಕೆ, ಭಾರತ್ ಸ್ಕೌಟ್ಸ್ ಮತ್ತು ಗೈಡ್ಸ್ ಜಿಲ್ಲಾ ಸಂಸ್ಥೆ ವತಿಯಿಂದ ಜಿಲ್ಲಾ ಸ್ಕೌಟ್ಸ್ ಮತ್ತು ಗೈಡ್ಸ್ ಸಮುದಾಯ ಭವನದಲ್ಲಿ ಹತ್ತು ವರ್ಷದಿಂದ 16 ವರ್ಷದ ವಯೋಮಾನದ ಮಕ್ಕಳಿಗಾಗಿ ಹಮ್ಮಿಕೊಂಡಿದ್ದ ಚಿಣ್ಣರ ಪ್ರತಿಭಾ ಕಲರವ ಕಾರ್ಯಕ್ರಮದಲ್ಲಿ ಮಾತನಾಡಿ, ಕೇಂದ್ರ ಕನ್ನಡ ಸಾಹಿತ್ಯ ವೇದಿಕೆ ಸಂಸ್ಥಾಪಕ ಅಧ್ಯಕ್ಷ ಕೊಟ್ರೇಶ್ ಎಸ್. ಉಪ್ಪಾರ್ ಮಾರ್ಗದರ್ಶನದಲ್ಲಿ ಜಾತ್ಯಾತೀತವಾಗಿ, ಧರ್ಮಾತೀತವಾಗಿ ಸಾಹಿತ್ಯಿಕ, ಸಾಂಸ್ಕೃತಿಕವಾಗಿ ಸಮಸಮಾಜದ ಕನಸು ಹೊತ್ತು ರಾಜ್ಯ ಹಾಗೂ ಹೊರ ರಾಜ್ಯಗಳಲ್ಲಿ ನಿರಂತರವಾಗಿ ಕಾರ್ಯಕ್ರಮಗಳನ್ನು ಹಮ್ಮಿಕೊಳ್ಳುತ್ತಾ ಎಲೆಮರೆ ಕಾಯಿಯಂತಹ ಸಾಧಕರನ್ನು ಗುರುತಿಸಲಾಗುತ್ತಿದೆ. ವೈಚಾರಿಕ ಹಾಗೂ ವೈಜ್ಞಾನಿಕ ಮನೋವೃತ್ತಿ ವೃದ್ಧಿಸುವ ಮತ್ತು ಬಸವಾದಿ ಶಿವಶರಣರ ತತ್ವ ಸಿದ್ಧಾಂತಗಳನ್ನು ಪಸರಿಸುತ್ತಾ ವೇದಿಕೆ ಮುನ್ನುಗ್ಗುತ್ತಿದೆ ಎಂದರು.

ಸಂಪನ್ಮೂಲವ್ಯಕ್ತಿ ವೇದಶ್ರೀ ನಿಶಿತ್ ಅವರು ಅಮೋಜಿನ ಗಣಿತಟಿ ಹಾಗೂ ಚಿತ್ರ ಕಲಾವಿದೆ ಹೆಚ್.ಎಸ್. ಬಿಂದು ಅವರು ಅಮಂಡಲ ಕ್ರಾಫ್ಟ್‌ಟಿ ಮತ್ತು ಕವಯಿತ್ರಿ ಎಂ. ಕೆ. ಲತಾಮಣಿ ತುರುವೇಕೆರೆ ಶಿಶು ಕಾವ್ಯದ ಬಗ್ಗೆ ತಿಳಿಸಿಕೊಟ್ಟರು.

ವೇದಿಕೆ ಸಂಸ್ಥಾಪಕ ಅಧ್ಯಕ್ಷ ಕೊಟ್ರೇಶ್ ಎಸ್. ಉಪ್ಪಾರ್, ರಾಜ್ಯ ಕೋಶಾಧ್ಯಕ್ಷ ಎಚ್.ಎಸ್. ಬಸವರಾಜ್, ರಾಜ್ಯ ಜಂಟಿ ಕಾರ್ಯದರ್ಶಿ ನಾಗರಾಜ ದೊಡ್ಡಮನಿ, ತಾಲ್ಲೂಕು ಕಾರ್ಯದರ್ಶಿ ಸಿ. ಎನ್. ನೀಲಾವತಿ, ಜಿಲ್ಲಾ ಮುಖ್ಯ ಆಯುಕ್ತ ಡಾ. ವೈ.ಎಸ್. ವೀರಭದ್ರಪ್ಪ, ಜಿಲ್ಲಾ ಕಾರ್ಯದರ್ಶಿ ಸುರೇಶ್ ಗುರೂಜಿ, ರಾಜ್ಯ ಸಹಾಯಕ ಸಂಘಟನಾ ಆಯುಕ್ತೆ ಎಚ್.ಎಂ. ಪ್ರಿಯಾಂಕ, ಜಿಲ್ಲಾ ಖಜಾಂಚಿ ಆರ್.ಎಸ್. ರಮೇಶ್, ರೋವರ್ ಲೀಡರ್ ಆರ್.ಜಿ. ಗಿರೀಶ್, ಜನನಿ ಫೌಂಡೇಷನ್ ಅಧ್ಯಕ್ಷೆ ಎಚ್.ಎಸ್. ಭಾನುಮತಿ, ಹಾಸನಾಂಬ ಮಹಿಳಾ ಸಂಘದ ಅಧ್ಯಕ್ಷೆ ಪದ್ಮಾವತಿ ವೆಂಕಟೇಶ್ ಮತ್ತಿತರರಿದ್ದರು.

# ಉದಯಪುರ ಸರ್ಕಾರಿ ಕಾಲೇಜಿನಲ್ಲಿ ಪಠ್ಯೇತರ ಚಟುವಟಿಕೆ ಸಮಾರೋಪ



**ಕನ್ನಡ ಪೋಸ್ಟ್ ನ್ಯೂಸ್ ನೆಟ್ವರ್ಕ್**

ಚನ್ನರಾಯಪಟ್ಟಣ: ತಾಲ್ಲೂಕಿನ ದಂಡಿಗನಹಳ್ಳಿ ಹೋಬಳಿ ಉದಯಪುರ ಸರ್ಕಾರಿ ಪ್ರಥಮ ದರ್ಜೆ ಕಾಲೇಜಿನಲ್ಲಿ 2024-25ನೇ ಸಾಲಿನ ಪಠ್ಯೇತರ ಚಟುವಟಿಕೆಗಳ ಸಮಾರೋಪ ಸಮಾರಂಭ ಯಶಸ್ವಿಯಾಗಿ ನೆರವೇರಿತು.

ಮಹಿಳಾ ಸರ್ಕಾರಿ ಪ್ರಥಮ ದರ್ಜೆ ಕಾಲೇಜಿನ ಕನ್ನಡ ಪ್ರಾಧ್ಯಾಪಕ ಡಾ. ಹೆಚ್.ಎನ್. ಮಂಜುರಾಜ್ ಮಾತನಾಡಿ, ವಿದ್ಯಾರ್ಥಿಗಳಲ್ಲಿ ಅಡಗಿರುವ ಬಹುಮುಖ ಪ್ರತಿಭೆಯನ್ನು ಅನಾವರಣಗೊಳಿಸುವ ಮಾಧ್ಯಮವೇ ಈ ಸಮಾರಂಭ. ಆದರೆ ಇಂದು ವಿದ್ಯಾರ್ಥಿಗಳಲ್ಲಿ ಸೃಜನಶೀಲ ಪ್ರತಿಭೆ ಮಾಯವಾಗುತ್ತಿದೆ ಎಂದು ಬೇಸರ ವ್ಯಕ್ತಪಡಿಸಿದರು.

ಯಾವುದೇ ಕೆಲಸವಾದರೂ ಪ್ರಾಮಾಣಿಕವಾಗಿ ಕರ್ತವ್ಯ ನಿರ್ವಹಿಸಿದರೆ ಯಶಸ್ಸು ಸಿಗುತ್ತದೆ. ಅನಾವಶ್ಯಕವಾಗಿ ಮೊಬೈಲ್ ಬಳಕೆ ಬಿಡಬೇಕು. ರೀಲ್ಸ್ ಮಾಡುತ್ತಾ ಕಾಲಕಳೆಯುವ ಬದಲು ಉಪಯುಕ್ತ ಕಾರ್ಯಕ್ರಮಗಳನ್ನು ಅಪ್‌ಲೋಡ್ ಮಾಡುವುದರ ಮೂಲಕ ಹಣ ಮತ್ತು ಕೀರ್ತಿ ಗಳಿಸಬಹುದೆಂದು ಉದಾಹರಣೆಗಳ ಮೂಲಕ ವಿವರಿಸಿದರು.

ಸಾಂಸ್ಕೃತಿಕ ವೇದಿಕೆ ಸಂಚಾಲಕ ಡಾ. ಎಂ.ಕೆ. ಮಹೇಶ್ ಮಾತನಾಡಿ, ಪಠ್ಯದ ಜೊತೆಗೆ ಪಠ್ಯೇತರ ಚಟುವಟಿಕೆಗಳು ತುಂಬಾ ಅನಿವಾರ್ಯವಾಗಿದೆ. ವಿದ್ಯಾರ್ಥಿಗಳಿಗೆ ಸೂಕ್ತವಾದ ವೇದಿಕೆಯನ್ನು ಪ್ರಾಮಾಣಿಕವಾಗಿ ಕಾಲೇಜು ಒದಗಿಸಿದೆ ಎಂದರು.

ಅಧ್ಯಕ್ಷತೆ ವಹಿಸಿದ್ದ ಪ್ರಾಂಶುಪಾಲ ಡಾ. ಹೆಚ್.ಡಿ. ಕುಮಾರ್ ಮಾತನಾಡಿ, ಕಾಲೇಜಿನಲ್ಲಿ ವಿದ್ಯಾರ್ಥಿಗಳಿಗೆ ಸೂಕ್ತ ಸೌಲಭ್ಯ ಒದಗಿಸಲಾಗಿದೆ. ಗ್ರಾಮೀಣ ಭಾಗದ ವಿದ್ಯಾರ್ಥಿಗಳಿಗೆ ಗುಣಮಟ್ಟದ ಶಿಕ್ಷಣ ನೀಡುವುದರ ಜೊತೆಗೆ ಪಠ್ಯೇತರ ಚಟುವಟಿಕೆಗಳಿಗೆ ಸಹಕಾರ ನೀಡಲಾಗಿದೆ ಎಂದರು.

# ರೋಟರಿ ಸಂಸ್ಥೆ ಸಮಾಜ ಸೇವೆಗೆ ಹೆಸರುವಾಸಿ

**ಕನ್ನಡ ಪೋಸ್ಟ್ ನ್ಯೂಸ್ ನೆಟ್ವರ್ಕ್**

ಹಾಸನ: ರೋಟರಿ ಸಂಸ್ಥೆಯಂತಹ ಸಾಮಾಜಿಕ ಸೇವಾ ಸಂಸ್ಥೆ ಅಂತಾರಾಷ್ಟ್ರೀಯ ಮಟ್ಟದಲ್ಲೂ ಮತ್ತೊಂದಿಲ್ಲ ಎಂದು ಯುವಜನ ಸಬಲೀಕರಣ ಹಾಗೂ ಕ್ರೀಡಾ ಇಲಾಖೆಯ ಸಹಾಯಕ ನಿರ್ದೇಶಕ ಸಿ.ಕೆ. ಹರೀಶ್ ಅಭಿಪ್ರಾಯಪಟ್ಟರು.

ನಗರದ ಕಲಾ ಕಾಲೇಜು ಮೈದಾನದಲ್ಲಿ ರೋಟರಿ ಕ್ಲಬ್ ಆಫ್ ಸೆಂಟ್ರಲ್ ವತಿಯಿಂದ ಆಯೋಜಿಸಲಾಗಿದ್ದ ಸೆಂಟ್ರಲ್ ಪ್ರಿಮಿಯರ್ ಲೀಗ್ ಕ್ರಿಕೆಟ್ ಪಂದ್ಯಾವಳಿ ಉದ್ಘಾಟಿಸಿ ಮಾತನಾಡಿದರು.

ರೋಟರಿ ಸಂಸ್ಥೆಯು ವಿಶ್ವದಲ್ಲಿ ಪೋಲಿಯೋ ನಿರ್ಮೂಲನೆಯಲ್ಲಿ ಬಹುದೊಡ್ಡ ಪಾತ್ರ ವಹಿಸಿದೆ. ಜೊತೆಗೆ ಆಯಾ ಸಂದರ್ಭಕ್ಕೆ ಎದುರಾಗುವ ವಿಪತ್ತುಗಳ ನಿರ್ವಹಣೆಯಲ್ಲಿ ಸ್ಥಳೀಯ ಸರ್ಕಾರಗಳಿಗೆ ರೋಟರಿ ನೀಡುವ ನೆರವು ಬಹುದೊಡ್ಡ ಮಟ್ಟದಲ್ಲಿದ್ದು, ಇಂತಹ ಸಂಸ್ಥೆಗಳ ಕಾರ್ಯಗಳಲ್ಲಿ ಭಾಗವಹಿಸುವುದೇ ಹೆಮ್ಮೆಯ ಸಂಗತಿ ಎಂದರು.



ಕ್ರೀಡೆಯಿಂದ ಮಾನಸಿಕ ಹಾಗೂ ಶಾರೀರಿಕ ಆರೋಗ್ಯ ಉತ್ತಮವಾಗಿರುತ್ತದೆ. ಬಾಲ್ಯದಿಂದಲೇ ಮಕ್ಕಳಿಗೆ ದೈಹಿಕ ಆರೋಗ್ಯ ಕಾಪಾಡಿಕೊಳ್ಳುವ ನಿಟ್ಟಿನಲ್ಲಿ ಒಂದಿಲ್ಲೊಂದು ಕ್ರೀಡೆಯಲ್ಲಿ ತೊಡಗಿಸಿ ಅವರನ್ನು ಆರೋಗ್ಯವಂತ ಪ್ರಜೆಗಳನ್ನಾಗಿ ನಿರ್ಮಾಣ ಮಾಡುವ ಪಾತ್ರ ಸಮಾಜದ ಮೇಲಿದೆ ಎಂದು ತಿಳಿಸಿದರು.

ಅಂತಾರಾಷ್ಟ್ರೀಯ ಕ್ರೀಡಾಪಟು ಶಾಂತಕುಮಾರ್ ಮಾತನಾಡಿ, ರೋಟರಿ ಸಂಸ್ಥೆಯು ಸಮಾಜದಲ್ಲಿ ಹತ್ತಾರು ಕಾರ್ಯಗಳನ್ನು ರೂಪಿಸಿ ನೊಂದವರ ಪರ ನಿಲ್ಲುತ್ತಿದೆ.

ರೋಟರಿ ಸಂಸ್ಥೆಯ ಆಯೋಜಿಸುವ ಕಾರ್ಯಕ್ರಮಗಳಿಂದ ಸಮಾಜಕ್ಕೆ ಬಹಳಷ್ಟು ಅನುಕೂಲವಿದ್ದು ಅರ್ಹರು ಅದನ್ನು ಸದುಪಯೋಗ ಪಡಿಸಿಕೊಳ್ಳಬೇಕಿದೆ ಎಂದರು.

ಚನ್ನರಾಯಪಟ್ಟಣ ಕನ್ನಡ ಸಾಹಿತ್ಯ ಪರಿಷತ್ತಿನ ಅಧ್ಯಕ್ಷ ಹಡೇನಹಳ್ಳಿ ಲೋಕೇಶ್ ಮಾತನಾಡಿ, ಕ್ರೀಡೆಯು ದೈಹಿಕ ಆರೋಗ್ಯ ಕಾಪಾಡುವ ಜೊತೆ ಜೊತೆಗೆ ಸ್ನೇಹ ಹಾಗೂ ಸೌಹಾರ್ದತೆಯನ್ನು ಬೆಸೆಯುವಲ್ಲಿ ಪ್ರಮುಖ ಪಾತ್ರ ವಹಿಸುತ್ತದೆ. ಇತ್ತೀಚಿನ ದಿನಗಳಲ್ಲಿ ದೇಶದ ಕ್ರೀಡಾಪಟುಗಳು ಉತ್ತಮ ಸಾಧನೆ ಮಾಡುತ್ತಿದ್ದು, ದೇಶವನ್ನು ಅಂತರಾಷ್ಟ್ರೀಯ ಮಟ್ಟದಲ್ಲಿ ಕ್ರೀಡೆಯಿಂದ ಗುರುತಿಸುವ ಮಟ್ಟಕ್ಕೆ ತಂದು ನಿಲ್ಲಿಸಿರುವುದು ಗೌರವದ ಸಂಗತಿಯಾಗಿದೆ ಎಂದರು.

ಮಾಜಿ ವಲಯ ಪಾಲಕ ರೊ. ಮೋಹನ್ ಮಾತನಾಡಿ, ರೋಟರಿ ಎಂದರೆ ಬರಿ ಸೇವೆಯಲ್ಲ. ರೋಟರಿಯಲ್ಲಿ ಇತರ ಕ್ಲಬ್ಗಳ ಜೊತೆಗೆ ಬಾಂದವ್ಯ ಬೆಸೆಯಲು ಕ್ರೀಡೆ ಸಹಕಾರಿಯಾಗಲಿದೆ. ಕ್ರೀಡಾ ಚಟುವಟಿಕೆಗಳು ಹೆಚ್ಚು ನಡೆದಷ್ಟು ರೋಟರಿಯಲ್ಲಿ ಸಮನ್ವಯ ಹೆಚ್ಚಲಿದೆ ಎಂದರು.

ಕಾರ್ಯಕ್ರಮದ ಅಧ್ಯಕ್ಷತೆ ವಹಿಸಿದ್ದ ರೋಟರಿ ಕ್ಲಬ್ ಆಫ್ ಸೆಂಟ್ರಲ್ನ ಅಧ್ಯಕ್ಷ ನಾಗೇಶ್ ಎಂ.ಡಿ ಮಾತನಾಡಿ, ರೋಟರಿ ಕ್ಲಬ್ ಆಫ್ ಸೆಂಟ್ರಲ್ ನೂತನ ಕ್ಲಬ್ ಆಗಿದ್ದು, ವಿವಿಧ ಯೋಜನೆಗಳನ್ನು ರೂಪಿಸುತ್ತಿದೆ. ಮುಂದಿನ ದಿನಗಳಲ್ಲೂ ಕ್ಲಬ್ಬಿನ ಎಲ್ಲರ ಸಹಕಾರ ಪಡೆದು ಸಮಾಜಕ್ಕೆ ಇನ್ನು ಹೆಚ್ಚಿನ ಸೇವೆ ಮಾಡುವುದಾಗಿ ವಿಶ್ವಾಸದ ನುಡಿಗಳನ್ನಾಡಿದರು.

ಮಾಜಿ ಜಿಲ್ಲಾ ಗವರ್ನರ್ ಗಳಾದ ರೊ.ಎಂ.ಕೆ ಗೋವರ್ಧನ್ ಕುಮಾರ್, ರೊ.ಬಿ.ಎನ್ ರಮೇಶ್,ವಲಯ ಪಾಲಕ ರೊ. ಸಂತೋಷ್, ರೊ. ನಿರ್ಮಲ್ ಕುಮಾರ್ ಜೈನ್ ಕ್ರೀಡಾಡುಗಳಿಗೆ ಶುಭ ಕೋರಿದರು.

ಪಂದ್ಯಾವಳಿಯಲ್ಲಿ ಭಾಗವಹಿಸಿದ್ದ ತಂಡಗಳ ಪೈಕಿ ರೋಟರಿ ಕ್ಲಬ್ ಆಫ್ ಮಿಡ್ ಟೌನ್ ತಂಡವು ಪ್ರಥಮ ಬಹುಮಾನ ಪಡೆದರೆ, ರೋಟರಿ ಕ್ಲಬ್ ಆಫ್ ಸೆಂಟ್ರಲ್ ರನ್ನರ್ ಅಪ್ ಪ್ರಶಸ್ತಿ ಪಡೆಯಿತು. ಚನ್ನರಾಯಪಟ್ಟಣ ವಿಷನ್ ರೋಟರಿ ತಂಡವು ಮೂರನೇ ಸ್ಥಾನ ಪಡೆದುಕೊಂಡಿತು. ಪಂದ್ಯಾವಳಿಯಲ್ಲಿ ವಿವಿಧ ಕ್ಲಬ್ ಗಳ ರೋಟರಿ ಅಧ್ಯಕ್ಷರು ಹಾಗೂ ಪದಾಧಿಕಾರಿಗಳು ಭಾಗವಹಿಸಿದ್ದರು.

## ವಕೀಲ ಡಿ.ಟಿ. ಪ್ರಸನ್ನಗೆ ಅಭಿನಂದನೆ



ಹಾಸನ: ಜಿಲ್ಲಾ ಸರ್ಕಾರಿ ವಕೀಲರಾಗಿ ನೇಮಕವಾಗಿರುವ ಜಿಲ್ಲಾ ವಕೀಲರ ಸಂಘದ ಅಧ್ಯಕ್ಷ ಡಿ.ಟಿ. ಪ್ರಸನ್ನ ಅವರಿಗೆ ಸಹೋದ್ಯೋಗಿಗಳು ಅಭಿನಂದಿಸಿದರು.

ವಕೀಲ ಚನ್ನಂಗಿಹಳ್ಳಿ ಶ್ರೀಕಾಂತ್ ಮಾತನಾಡಿ, ರಾಜ್ಯ ಸರ್ಕಾರ ಜಿಲ್ಲಾ ನ್ಯಾಯಾಲಯ ಮತ್ತು ಇತರೆ ನ್ಯಾಯಾಲಯಗಳಲ್ಲಿ ಸರ್ಕಾರದ ಪರ ಸಿವಿಲ್ ಪ್ರಕರಣಗಳಲ್ಲಿ ವಾದ ಮಂಡಿಸಲು ಜಿಲ್ಲಾ ವಕೀಲರ ಸಂಘದ ಅಧ್ಯಕ್ಷ ಡಿ.ಟಿ. ಪ್ರಸನ್ನ ಅವರನ್ನು ನೇಮಕ ಮಾಡಿದೆ. ಪ್ರಸನ್ನ ಹಲವಾರು ಸಂಘ ಸಂಸ್ಥೆಗಳಲ್ಲಿ ಕ್ರಿಯಾಶೀಲರಾಗಿ ಕೆಲಸ ಮಾಡುತ್ತಿದ್ದಾರೆ. ಅವರ ಭವಿಷ್ಯವು ಚೆನ್ನಾಗಿರಲಿ ಎಂದು ಹರಸಿದರು. ವಕೀಲ ಕೆ.ಎಸ್. ಯೋಗೇಶ್ ಇದ್ದರು.

## ಇತಿಹಾಸದಲ್ಲಿ ಈ ದಿನ

### ಮೇ -21

**1991:** ಭಾರತದ ಮಾಜಿ ಪ್ರಧಾನಮಂತ್ರಿ, ರಾಜೀವ್ ಗಾಂಧಿ ಅವರು ತಮಿಳುನಾಡಿನ ಶ್ರೀಪೆರುಂಬುದೂರಿನಲ್ಲಿ ಲಿಟ್ಟೆ ಸಂಘಟನೆಯ ಮಹಿಳಾ ಆತ್ಮಾಹುತಿ ಬಾಂಬರ್‌ನಿಂದ ಹತ್ಯೆಗೀಡಾದರು. ಈ ಘಟನೆ ದೇಶದ ರಾಜಕೀಯವನ್ನು ಬೆರಗುಗೊಳಿಸಿತು. ಈ ದಿನವನ್ನು ಭಾರತದಲ್ಲಿ ಪ್ರತಿವರ್ಷ ರಾಷ್ಟ್ರೀಯ ಉಗ್ರವಿರೋಧಿ ದಿನವಾಗಿ ಆಚರಿಸಲಾಗುತ್ತದೆ.

**1981:** ಭಾರತವು ತನ್ನ ಮೊದಲ ಅಂಟಾರ್ಟಿಕಾ ವಿಜ್ಞಾನ ಮಿಷನ್ ಅನ್ನು ಪ್ರಾರಂಭಿಸಿತು. ಈ ಮೂಲಕ ಭಾರತವು ಅಂಟಾರ್ಟಿಕಾ ಸಂಶೋಧನೆಯಲ್ಲಿ ತೊಡಗಿದ ಕೆಲವೇ ರಾಷ್ಟ್ರಗಳಲ್ಲಿ ಒಂದಾಗಿ ಪರಿಗಣಿಸಲ್ಪಟ್ಟಿತು.

**ಜನನ**

**1935:** ಶರದ್ ಜೋಶಿ, ಪ್ರಸಿದ್ಧ ಭಾರತೀಯ ಕೃಷಿ ನೀತಿ ತಜ್ಞರು ಮತ್ತು ರಾಜಕಾರಣಿಗಳು.

**1960:** ಮೋಹನ್‌ಲಾಲ್, ಮಲಯಾಳಂ ಚಿತ್ರರಂಗದ ಪ್ರಸಿದ್ಧ ನಟರು, ಭಾರತೀಯ ಚಿತ್ರರಂಗದಲ್ಲಿ ಪ್ರಮುಖ ಪಾತ್ರವಹಿಸಿದ್ದಾರೆ.

**1971:** ಆದಿತ್ಯ ಚೋಪ್ರಾ, ಹಿಂದಿ ಚಿತ್ರರಂಗದ ಪ್ರಸಿದ್ಧ ನಿರ್ದೇಶಕರು ಮತ್ತು ನಿರ್ಮಾಪಕರು.

**ಮರಣ**

**1960:** ಗಾಮಾ ಪೆಹಲ್ವಾನ್, ಪ್ರಸಿದ್ಧ ಭಾರತೀಯ ಕುಸ್ತಿ ಪಟು, ದಿ ಗ್ರೇಟ್ ಗಾಮಾ ಎಂದು ಖ್ಯಾತರಾಗಿದ್ದರು.

# ಜಾನುವಾರುಗಳಿಗೆ ಒಂದೇ ಬಾರಿ 2 ಲಸಿಕೆ

## ಜೂನ್ 4ರ ವರೆಗೆ ಅಭಿಯಾನ : ಶೇ. 53 ರಷ್ಟು ಗುರಿ ಸಾಧನೆ

**ಕನ್ನಡ ಪೋಸ್ಟ್ ನ್ಯೂಸ್ ನೆಟ್ವರ್ಕ್**

ಹಾಸನ: ಜಿಲ್ಲಾದ್ಯಂತ ಜಾನುವಾರುಗಳಿಗೆ ಲಸಿಕಾ ಅಭಿಯಾನ ಆರಂಭವಾಗಿದ್ದು ಇದೆ ಮೊದಲ ಬಾರಿಗೆ ಒಂದೇ ಅವಧಿಯಲ್ಲಿ ಎರಡು ಲಸಿಕೆ ಹಾಕಲಾಗುತ್ತಿದೆ.

ಚರ್ಮಗಂಟು ಹಾಗೂ ಕಾಲುಬಾಯಿ ಲಸಿಕೆಯನ್ನು ಒಂದೇ ಅವಧಿಯಲ್ಲಿ ನೀಡುತ್ತಿರುವುದರಿಂದ ರೈತರು ಸಕಾರಾತ್ಮಕವಾಗಿ ಸ್ಪಂದಿಸುತ್ತಿದ್ದಾರೆ. ವರ್ಷಕ್ಕೆ ಎರಡು ಬಾರಿ ಜಾನುವಾರುಗಳಿಗೆ ಲಸಿಕೆ ಹಾಕಲಾಗುತ್ತದೆ. ಆದರೆ ಕಾಲುಬಾಯಿ ಹಾಗೂ ಚರ್ಮಗಂಟು ರೋಗ ಲಸಿಕೆಯನ್ನು ಪ್ರತ್ಯೇಕವಾಗಿ ಹಾಕಿದರೆ ರೈತರು ಎರಡೆರಡು ಸಲ ಪಶು ಆಸ್ಪತ್ರೆಗೆ ಜಾನುವಾರುಗಳನ್ನು ತರಬೇಕಿತ್ತು. ಮನೆ ಮನೆಗೆ ಸಿಬ್ಬಂದಿ ಭೇಟಿ ಸಂದರ್ಭದಲ್ಲೂ ಎರಡೆರಡು ಸಲ ಭೇಟಿ ನೀಡಬೇಕಿತ್ತು. ಎಷ್ಟೋ ರೈತರು ಒಂದು ಸಲ ಲಸಿಕೆ ಹಾಕಿಸಿದರೆ ಸಾಕು ಮತ್ತೊಮ್ಮೆ ಬೇಡ ಎಂದು ತಾತ್ಸಾರ ತೋರುತ್ತಿದ್ದರು. ಆ ಸಮಸ್ಯೆಗೆ ಪರಿಹಾರ ಕಂಡುಕೊಂಡಿರುವ ಪಶುಪಾಲನಾ ಇಲಾಖೆ ಎರಡೂ ಲಸಿಕೆಗಳನ್ನು ಒಂದೇ ಬಾರಿ ಹಾಕುತ್ತಿದೆ. ಇದರಿಂದ ಶ್ರಮ, ಸಮಯ ಹಾಗು ವೆಚ್ಚವನ್ನು ನಿಯಂತ್ರಿಸಬಹುದಾಗಿದೆ.



### ಕಾಯಿಲೆ ವಿರುದ್ಧ ಪಶು ಇಲಾಖೆ ಸಮರ

ಮೇ 1 ರಿಂದ ಲಸಿಕಾ ಅಭಿಯಾನ ಆರಂಭವಾಗಿದ್ದು ಜೂನ್ 4ರ ವರೆಗೆ ನಡೆಯಲಿದೆ. ಇಲ್ಲಿವರೆಗೆ ಶೇ. 53 ರಷ್ಟು ಲಸಿಕೆ ಹಾಕಲಾಗಿದ್ದು ವೈದ್ಯಾಧಿಕಾರಿ ಹಾಗೂ ಸಿಬ್ಬಂದಿ ಮನೆ ಮನೆಗೆ ಭೇಟಿ ನೀಡಿ ಕಾಲುಬಾಯಿ ಹಾಗೂ ಚರ್ಮಗಂಟು ರೋಗದ ವಿರುದ್ಧ ಸಮರ ಸಾರಿದ್ದಾರೆ. ಪಶು ವೈದ್ಯಕೀಯ ಇಲಾಖೆ ಅಧಿಕಾರಿಗಳು ಹೇಳುವ ಪ್ರಕಾರ ಜಿಲ್ಲೆಯ ಜಾನುವಾರುಗಳಿಗೆ ಕಾಯಿಲೆ ಹರಡಿಲ್ಲ. ಮುಂಜಾಗ್ರತಾ ಕ್ರಮವಾಗಿ ಲಸಿಕೆ ನೀಡಲಾಗುತ್ತಿದೆ ಎಂದರು.

ಜಿಲ್ಲೆಯಲ್ಲಿ 6.30 ಲಕ್ಷ ಜಾನುವಾರುಗಳಿವೆ. ಅದರಲ್ಲಿ ಕಾಲು ಬಾಯಿ ಹಾಗೂ ಚರ್ಮಗಂಟು ಲಸಿಕೆಗೆ 3,38,414 ದನಕರುಗಳು ಅರ್ಹವಾಗಿದ್ದು, ಈ ವರೆಗೆ 3,25,193 ರಾಸುಗಳಿಗೆ ಲಸಿಕೆ ಹಾಕಲಾಗಿದೆ. ಆಲೂರು ತಾಲ್ಲೂಕಿನ 15,207 ಜಾನುವಾರುಗಳ ಪೈಕಿ 14,714 ರಾಸುಗಳಿಗೆ ಲಸಿಕೆ ನೀಡಲಾಗಿದೆ. ಅರಕಲಗೂಡಿನ 48,014 ರಾರುಗಳ ಪೈಕಿ 44,607, ಅರಸೀಕೆರೆ ತಾಲ್ಲೂಕಿನ 49,979 ಜಾನುವಾರುಗಳ ಪೈಕಿ 48,765 ಜಾನುವಾರುಗಳಿಗೆ, ಬೇಲೂರಿನ 26,698 ದನಗಳು ಲಸಿಕೆಗೆ ಅರ್ಹವಾಗಿದ್ದು 26,052 ರಾಸುಗಳಿಗೆ ಲಸಿಕೆ ನೀಡಲಾಗಿದೆ. ಚನ್ನರಾಯಪಟ್ಟಣ ತಾಲ್ಲೂಕಿನ 83,168 ರಾಸುಗಳಲ್ಲಿ 80,300 ದನಕರುಗಳಿಗೆ ಕಾಲುಬಾಯಿ ಹಾಗು ಚರ್ಮಗಂಟು ಲಸಿಕೆ ಹಾಕಲಾಗಿದೆ. ಹಾಸನದ 72,874 ರಾಸುಗಳ ಪೈಕಿ 70,405, ಹೊಳೆನರಸೀಪುರ ತಾಲ್ಲೂಕಿನ 29,837 ದನಕರುಗಳ ಪೈಕಿ 28,132 ಹಾಗು ಸಕಲೇಶಪುರದ 12,637 ರಾಸುಗಳಲ್ಲಿ 12,218 ಜಾನುವಾರುಗಳಿಗೆ ಈಗಾಲಗೇ ಲಸಿಕೆಯನ್ನು ಹಾಕಲಾಗಿದೆ.

### ಲಸಿಕೆಯಿಂದಾಗುವ ಪ್ರಯೋಜನ

ಕಾಲುಬಾಯಿ ಶ್ವಾಸಕೋಶ ಮತ್ತು ತ್ವಚಾ ಕಾಯಿಲೆ ಆಗಿದ್ದು, ಇದು ಮೇಕೆ, ಹಸು, ಎತ್ತು, ಕುರಿ ಮುಂತಾದ ಪಶುಗಳಲ್ಲಿ ಕಾಣಿಸಿಕೊಳ್ಳುತ್ತದೆ. ಸಾಮಾನ್ಯವಾಗಿ 6 ತಿಂಗಳಿಗೊಮ್ಮೆ ಅಭಿಯಾನವನ್ನು ಆಯೋಜಿಸಲಾಗುತ್ತದೆ. ಕಾಲುಬಾಯಿ ರೋಗ ತಡೆಯಲು ಲಸಿಕೆ ಸಹಾಯ ಮಾಡುತ್ತದೆ. ಅದರಿಂದ ಪಶುಗಳ ಆರೋಗ್ಯ ಉತ್ತಮವಾಗಿರುತ್ತದೆ. ಹಾಲು ಉತ್ಪಾದನೆ ಮತ್ತು ಶ್ರಮ ಸಾಮರ್ಥ್ಯವೂ ಹೆಚ್ಚಾಗುತ್ತದೆ. ರೈತರಿಗೆ ಆರ್ಥಿಕ ನಷ್ಟ ತಪ್ಪಿಸಲು ಲಸಿಕೆ ಸಹಾಯವಾಗುತ್ತದೆ.

### ದ್ವಿತೀಯ ಸ್ಥಾನದಲ್ಲಿ ಹಾಸನ

ಅತಿಹೆಚ್ಚು ಜಾನುವಾರುಗಳನ್ನು ಹೊಂದಿರುವ ರಾಜ್ಯದ ಅತಿದೊಡ್ಡ ಜಿಲ್ಲೆಗಳ ಪಟ್ಟಿಯಲ್ಲಿ ಹಾಸನಕ್ಕೆ 2ನೇ ಸ್ಥಾನವಿದೆ. ಹಾಲು ಉತ್ಪಾದನೆಯಲ್ಲೂ ಜಿಲ್ಲೆ ಗುರುತರ ಸ್ಥಾನದಲ್ಲಿರುವುದರಿಂದ ಪಶುಗಳ ಆರೈಕೆಗೆ ಇಲಾಖೆ ಸರ್ವ ಸನ್ನದ್ಧವಾಗಿ ಕೆಲಸ ಮಾಡುತ್ತಿದೆ.

ಇದೆಲ್ಲದರ ಜೊತೆಗೆ ಹಾಸನದಲ್ಲಿ ಪಶು ರೋಗ ತನಿಖಾ ಪ್ರಯೋಗಾಲಯ ಹಾಗು ಮಾಹಿತಿ ಕೇಂದ್ರ ತೆರೆಯುತ್ತಿದ್ದು, ರೈತರಿಗೆ ಮತ್ತಷ್ಟು ವರದಾನವಾಗಲಿದೆ.

> ಕಾಲುಬಾಯಿ ಹಾಗೂ ಚರ್ಮಗಂಟು ರೋಗ ತಡೆಗೆ ಲಸಿಕಾ ಅಭಿಯಾನವನ್ನು ಜಿಲ್ಲಾದ್ಯಂತ ಆರಂಭಿಸಿದ್ದು, ಶೇ. 53 ರಷ್ಟು ಪೂರ್ಣಗೊಂಡಿದೆ. ರೈತರು ತಪ್ಪದೇ ತಮ್ಮ ಜಾನುವಾರುಗಳಿಗೆ ಲಸಿಕೆ ಹಾಕಿಸಬೇಕು. ಇದರಿಂದ ರೋಗ ರುಜಿನಗಳಿಂದ ಮೂಕ ಪ್ರಾಣಿಗಳನ್ನು ಕಾಪಾಡಬಹುದು.
>
> - ಡಾ. ರಮೇಶ್, ಪಶುಪಾಲನಾ ಇಲಾಖೆ ಉಪನಿರ್ದೇಶಕ

## ಬಸ್ ಹತ್ತುವಾಗ ಚಿನ್ನಾಭರಣ ಕಳವು

**ಕನ್ನಡ ಪೋಸ್ಟ್ ನ್ಯೂಸ್ ನೆಟ್ವರ್ಕ್**

ಅರಸೀಕೆರೆ: ತಾಲ್ಲೂಕಿನ ಜಾವಗಲ್ ಬಸ್ ನಿಲ್ದಾನದಲ್ಲಿ ಕೆಎಸ್ಆರ್‌ಟಿಸಿ ಬಸ್ ಹತ್ತುವಾಗ ನೂಕುನುಗ್ಗಾಟದಲ್ಲಿ ಮಹಿಳೆಯ ಕಣ್ತಪ್ಪಿಸಿ 4.90 ಲಕ್ಷ ರೂ. ಮೌಲ್ಯದ ಚಿನ್ನಾಭರಣವಿದ್ದ ವ್ಯಾನಿಟಿ ಬ್ಯಾಗ್ ಕಳವು ಮಾಡಲಾಗಿದೆ.

ಚಿಕ್ಕಮಗಳೂರು ಜಿಲ್ಲೆ ಕಡೂರು ತಾಲ್ಲೂಕು ಎಸ್. ಬಿದರೆ ಗ್ರಾಮದ ಚೈತ್ರ ಚಿನ್ನಾಭರಣ ಕಳೆದುಕೊಂಡವರು. ಗೃಹ ಪ್ರವೇಶ ಸಮಾರಂಭ ನಿಮಿತ್ತ ಬೇಲೂರಿಗೆ ಬರುತ್ತಿದ್ದ ಅವರು ಜಾವಗಲ್ ಬಸ್ ನಿಲ್ದಾಣದಲ್ಲಿ ಬೇಲೂರು ಕಡೆಗೆ ತೆರಳುತ್ತಿದ್ದ ಬಸ್ ಹತ್ತುತ್ತಿದ್ದಾಗ ಕಳ್ಳತನವಾಗಿದೆ.

34 ಗ್ರಾಂ ತೂಕದ ಚಿನ್ನದ ಲಾಂಗ್ ನಕ್ಲೇಸ್, 17 ಗ್ರಾಂ ತೂಕದ ಶಾರ್ಟ್ ನಕ್ಲೇಸ್, 8 ಗ್ರಾಂ ತೂಕದ ಚಿನ್ನದ ಓಲೆ ಮತ್ತು ಜುಮುಕಿ, 3 ಗ್ರಾಂ ತೂಕದ ಚಿನ್ನದ ಉಂಗುರ ಕಳುವಾಗಿದೆ. ಜಾವಗಲ್ ಠಾಣೆಯಲ್ಲಿ ಪ್ರಕರಣ ದಾಖಲಾಗಿದೆ.

## ಜೋಳಕ್ಕೆ ಬಿಳಿ ರೋಗ: ಬೆಳೆ ನಾಶ



ಹೊಳೆನರಸೀಪುರ:ತಾಲ್ಲೂಕಿನ ಹರಿಹರಪುರ ಗ್ರಾಮ ಪಂಚಾಯಿತಿ ವ್ಯಾಪ್ತಿಯಲ್ಲಿ ಬಿತ್ತನೆ ಮಾಡಿದ್ದ ಜೋಳದ ಬೆಳೆಗೆ ಬಿಳಿ ರೋಗ ಕಾಣಿಸಿಕೊಂಡಿರುವುದರಿಂದ ರೈತರು ಆತಂಕಕ್ಕೀಡಾಗಿದ್ದಾರೆ. ಸಮಸ್ಯೆಯ ತೀವ್ರತೆ ಅರಿತ ರೈತರು ಬಿಳಿ ರೋಗ ಪೀಡಿತ ಗಿಡಗಳಿದ್ದ ಭೂಮಿಯನ್ನು ಉಳುಮೆ ಮಾಡಿ ಬೆಳೆ ನಾಶಪಡಿಸಿದ್ದಾರೆ. ಕಳಪೆ ಬಿತ್ತನೆ ಬೀಜ ವಿತರಣೆ ಮಾಡಿರುವುದರಿಂದ ಈ ರೀತಿಯ ಸಮಸ್ಯೆ ಕಾಣಿಸಿಕೊಂಡಿದೆ ಎಂದು ಆರೋಪಿಸಿರುವ ರೈತರು, ಈ ಬಗ್ಗೆ ಕೃಷಿ ಇಲಾಖೆ ಅಧಿಕಾರಿಗಳು ಪರಿಶೀಲನೆ ನಡೆಸಿ ಸಂಬಂಧಪಟ್ಟ ಬಿತ್ತನೆ ಬೀಜ ವಿತರಣಾ ಕಂಪನಿ ವಿರುದ್ಧ ಕ್ರಮ ತೆಗೆದುಕೊಳ್ಳಬೇಕೆಂದು ಆಗ್ರಹಿಸಿದ್ದಾರೆ.

Printed, Published and Owned by Manjunatha B.R. and Printed at PAPPAS PRINT HOUSE, BEHIND DISTRICT STADIUM, M.G.ROAD,VIDYANAGAR, HASSAN, KARNATAKA-573201 and published at No. 150, BANAVASE, SAKALESHPURA TALLUK, HASSAN DISTRICT, KARNATAKA-573201. Editor: MANJU BANAVASE. Ph: 8762954248